ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 37

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 13–01–2026

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ಬಳ್ಳಾರಿ: ಜೆಡಿಎಸ್ ಕಾರ್ಯಕಾರಣಿ ಸಭೆ

**ಬಳ್ಳಾರಿ, ಜ.12:** ನಗರದ ಜೆಡಿಎಸ್ ಕಚೇರಿಯಲ್ಲಿ ಮುಂಬರುವ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಚುನಾವಣೆಗಳು ಸಮೀಪಿಸುತ್ತಿರುವ ಹಿನ್ನಲೆಯಲ್ಲಿ, ಪಕ್ಷದ ಪೂರ್ವ ನಿಯೋಜಿತ ಕಾರ್ಯಕಾರಣಿ ಸಭೆ ನಡೆಯಿತು. ಸಭೆಗೆ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷರಾದ ಮೀನಹಳ್ಳಿ ತಾಯಣ್ಣ ಅವರು ನೇತೃತ್ವ ವಹಿಸಿದ್ದರು.

ಈ ಸಂದರ್ಭದಲ್ಲಿ ಚುನಾವಣೆಗಳ ಸಿದ್ಧತೆ, ಪಕ್ಷ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವುದು, ಬೂತ್ ಮಟ್ಟದ ಸಮಿತಿಗಳ ರಚನೆ, ಕಾರ್ಯಕರ್ತರ ಜವಾಬ್ದಾರಿಗಳು ಹಾಗೂ ಜನಸಂಪರ್ಕ ಕಾರ್ಯಕ್ರಮಗಳ ಕುರಿತು ವಿಸ್ತೃತ ಚರ್ಚೆ ನಡೆಯಿತು.

ಚುನಾವಣೆಗಳನ್ನು ಗಂಭೀರವಾಗಿ ಎದುರಿಸಲು ಎಲ್ಲ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವಂತೆ ಜಿಲ್ಲಾಧ್ಯಕ್ಷರಾದ ಮೀನಹಳ್ಳಿ ತಾಯಣ್ಣ ಕರೆ ನೀಡಿದರು. ಮುಂದುವರೆದು ಮಾತನಾಡಿದ ಅವರು, ಪಕ್ಷದ ತತ್ವ–ಸಿದ್ಧಾಂತಗಳನ್ನು ಜನರಿಗೆ ತಲುಪಿಸುವಲ್ಲಿ ಕಾರ್ಯಕರ್ತರ ಪಾತ್ರ ಮಹತ್ವದ್ದಾಗಿದ್ದು, ತಳಮಟ್ಟದಲ್ಲಿ ಸಂಘಟನೆ ಬಲಪಡಿಸಿದರೆ ಚುನಾವಣೆಯಲ್ಲಿ ಯಶಸ್ಸು ಸಾಧಿಸಬಹುದು ಎಂದು ಹೇಳಿದರು.

ಸಭೆಯಲ್ಲಿ ಪಕ್ಷದ ಹಿರಿಯ ನಾಯಕರಾದ ರೈತ ವಿಭಾಗದ ಅಧ್ಯಕ್ಷರಾದ ಲಕ್ಷ್ಮಿಕಾಂತ್ ರೆಡ್ಡಿ, ಸಂಡೂರು ತಾಲೂಕು ಅಧ್ಯಕ್ಷರಾದ ಕುರಿ ಕೊಪ್ಪ ಸೋಮಪ್ಪ, ಬಳ್ಳಾರಿ ನಗರ ಘಟಕದ ಅಧ್ಯಕ್ಷ ವನ್ನೂರು ಸ್ವಾಮಿ (ವಂಡ್ರಿ), ಕಂಪ್ಲಿ ತಾಲೂಕು ಅಧ್ಯಕ್ಷ ಮೇಘರಾಜ್, ಸಿರುಗುಪ್ಪ ತಾಲೂಕು ಅಧ್ಯಕ್ಷ ಶಿವನಾರಾಯಣ, ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪ, ಬಳ್ಳಾರಿ ಗ್ರಾಮಾಂತರ ಅಧ್ಯಕ್ಷ ಅಶೋಕ್ ಸಂಗನಕಲ್ಲು, ಹಿಂದುಳಿದ ವರ್ಗಗಳ ಅಧ್ಯಕ್ಷ ಹೊಸಗೇರಪ್ಪ, ಪ್ರಧಾನ ಕಾರ್ಯದರ್ಶಿಗಳಾದ ಮಧುರೈ ವಿಜಯ, ಅಲ್ಪಸಂಖ್ಯಾತರ ಅಧ್ಯಕ್ಷ ಜಾವೀದ್, ಕಾರ್ಮಿಕರ ಅಧ್ಯಕ್ಷ ಬಾಲು, ಶಿವಕುಮಾರ್, ರಾಮಾಂಜನಿ ಚಾಗನೂರು, ನಾಗರಾಜ್, ಹಾಜಿ ಬಾಯ್, ಹೊನ್ನೂರ್ವಲಿ, ಭವಾನಿ, ಶಬನಾ, ರೇಣುಕಾ, ಮಮತಾ, ಲಕ್ಷ್ಮಿ ಸೇರಿದಂತೆ ಅನೇಕ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಎಲ್‌ಒಸಿ ಬಳಿ ಐದು ಪಾಕ್ ಡ್ರೋಣ್ ಪ್ರತ್ಯಕ್ಷ–ಕಟ್ಟೆಚ್ಚರ

**ಶ್ರೀನಗರ, ಜ.12:**ಗಣರಾಜ್ಯೋತ್ಸವಕ್ಕೂ ಮುನ್ನಾ ಭಾತರದ ಗಡಿ ಬಳಿ ಪಾಕ್ ಡ್ರೋಣ್ ಚಟುವಟಿಕೆ ಹೆಚ್ಚಿದ್ದು , ಭಾರತೀಯ ಸೇನೆ ಗುಂಡಿನ ಉತ್ತರ ನೀಡಿದ ಬೆನ್ನೆಲ್ಲೆ ಪಾಕ್ ಡ್ರೋಣ್‌ಗಳು ವಾಪಸ್ಸಾಗಿವೆ.

ಜಮ್ಮು ಮತ್ತು ಕಾಶ್ಮೀರದ ನೌಶೇರಾ–ರಜೌರಿ ವಲಯದ ನಿಯಂತ್ರಣ ರೇಖೆಯ (ಎಲ್‌ಒಸಿ) ಉದ್ದಕ್ಕೂ ಅನೇಕ ಡ್ರೋನ್‌ಗಳು ಕಂಡುಬಂದಿವೆ ಎಂದು ರಕ್ಷಣಾ ಮೂಲಗಳು ಭಾನುವಾರ ತಿಳಿಸಿವೆ. ಭಾರತೀಯ ಸೇನೆಯು ಮಾನವರಹಿತ ವೈಮಾನಿಕ ವ್ಯವಸ್ಥೆಗಳನ್ನು (ಯುಎಎಸ್) ಕ್ರಮಗಳನ್ನು ಬಳಸಿದ್ದು, ಡ್ರೋನ್‌ಗಳನ್ನು ಹಿಂತಿರುಗುವಂತೆ ಒತ್ತಾಯಿಸಿದೆ ಎಂದು ಅವರು ಹೇಳಿದ್ದಾರೆ.

ಸಂಜೆ 6.35 ರ ಸುಮಾರಿಗೆ ನೌಶೇರಾ ವಲಯದ ಗಾನಿಯಾ–ಕಲ್ಸಿಯಾನ್ ಗ್ರಾಮದ ಮೇಲೆ ಒಂದು ಡ್ರೋನ್ ಅನ್ನು ನೋಡಿದರೆ, ಇನ್ನೊಂದನ್ನು ಸಂಜೆ 6.35 ಕ್ಕೆ ರಜೌರಿ ಜಿಲ್ಲೆಯ ತೆರಿಯಾತ್ನ ಖಬ್ಬರ್ ಗ್ರಾಮದಲ್ಲಿ ಗುರುತಿಸಲಾಗಿದೆ.

ಭಾರತೀಯ ಸೇನಾ ಪಡೆಗಳು ಲಘು ಮೆಷಿನ್ ಗನ್ (ಎಲ್‌ಎಂಜಿ) ಮತ್ತು ಮಧ್ಯಮ ಮೆಷಿನ್ ಗನ್ ಗಳನ್ನು (ಎಂಎಂಜಿ) ಬಳಸಿ ಗುಂಡು ಹಾರಿಸುವ ಮೊದಲು ಡ್ರೋನ್‌ಗಳು ಪಾಕಿಸ್ತಾನದ ಕಡೆಯಿಂದ ಬಂದವು ಮತ್ತು ಭಾರತೀಯ



ಭೂಪ್ರದೇಶದ ಮೇಲೆ ಸುಳಿದಾಡುತ್ತಿದ್ದವು ಎಂದು ಮೂಲಗಳು ತಿಳಿಸಿವೆ. ಇದಕ್ಕೂ ಮುನ್ನ ಭದ್ರತಾ ಪಡೆಗಳು ಜಮ್ಮು ಮತ್ತು ಕಾಶ್ಮೀರದ ಕನಾಚಕ್ ಪ್ರದೇಶದ ಅಂತಾರಾಷ್ಟ್ರೀಯ ಗಡಿಯಲ್ಲಿ (ಐಬಿ) ಅನುಮಾನಾಸ್ಪದ ಉಪಗ್ರಹ ಫೋನ್ ಸಂವಹನವನ್ನು ಪತ್ತೆಹಚ್ಚಿದ್ದವು. ಇದು ಜಮ್ಮು ಮತ್ತು ಕಾಶ್ಮೀರ ಪೊಲೀಸ್, ಗಡಿ ಭದ್ರತಾ ಪಡೆ, ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಸೇನೆಯ ವಿಶೇಷ ಕಾರ್ಯಾಚರಣೆ ಗುಂಪು ಜಂಟಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಲು ಪ್ರೇರೇಪಿಸಿತು. ಅಧಿಕಾರಿಗಳ ಪ್ರಕಾರ, ತುರಾಯಾ ಉಪಗ್ರಹ ಸಾಧನವನ್ನು ಬಳಸಿ ಸಂವಹನವನ್ನು ಪತ್ತೆಹಚ್ಚಲಾಗಿದೆ. ಈ ಹಿಂದೆ ಒಳನುಸುಳುವಿಕೆಗೆ ಬಳಸಲಾಗಿದ್ದ ಕನಾಚಕ್ ಬಳಿ ಭಯೋತ್ಪಾದಕರು ಈ ಸಂವಹನ ನಡೆಸಿದ್ದಾರೆ ಎಂದು ಅವರು ಶಂಕಿಸಿದ್ದಾರೆ.

ಏಪ್ರಿಲ್ 22 ರ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತ ಪ್ರಾರಂಭಿಸಿದ ಆಪರೇಷನ್ ಸಿಂಧೂರ್ ಸಮಯದಲ್ಲಿ, ಭಾರತವು ಹಲವಾರು ಪಾಕಿಸ್ತಾನದ ಡ್ರೋನ್‌ಗಳನ್ನು ಹೊಡೆದುರುಳಿಸಿತ್ತು. ಅಂದಿನಿಂದ, ಎಲ್‌ಒಸಿ ಮತ್ತು ಐಬಿ ಉದ್ದಕ್ಕೂ ಡ್ರೋನ್ ವೀಕ್ಷಣೆ ಕಡಿಮೆಯಾಗಿದೆ ಆದರೆ ಪಾಕಿಸ್ತಾನವು ಈ ಪ್ರದೇಶದಲ್ಲಿ ಯುಎವಿಗಳ ಮೂಲಕ ಭಾರತೀಯ ಭದ್ರತಾ ಪಡೆಗಳನ್ನು ಮೇಲ್ವಿಚಾರಣೆ ಮಾಡಲು ಪ್ರಯತ್ನಿಸುತ್ತಿದೆ.

ಶುಕ್ರವಾರ ರಾತ್ರಿ, ಸಾಂಬಾ ಜಿಲ್ಲೆಯ ಐಬಿ ಬಳಿಯ ಘಗ್ವಾಲ್ ನ ಪಲೂರಾ ಗ್ರಾಮದಲ್ಲಿ ಪಾಕಿಸ್ತಾನದಲ್ಲಿ ಡ್ರೋನ್ ನಿಂದ ಬೀಳಲಾಗಿದೆ ಎಂದು ಹೇಳಲಾದ ಶಸ್ತ್ರಾಸ್ತ್ರ ರವಾನೆಯನ್ನು ಭದ್ರತಾ ಪಡೆಗಳು ವಶಪಡಿಸಿಕೊಂಡಿವೆ. ವಶಪಡಿಸಿಕೊಳ್ಳುವಲ್ಲಿ ಎರಡು ಪಿಸ್ತೂಲ್ ಗಳು, ಮೂರು ಮ್ಯಾಗಜೀನ್ ಗಳು, 16 ಸುತ್ತುಗಳು ಮತ್ತು ಗ್ರೆನೇಡ್ ಸೇರಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ನ.11 ರಂದು ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜಯಂತಿಯನ್ನು ಆಚರಿಸುವುದಕ್ಕೆ ಕ್ರಮ ಕೈಗೊಳ್ಳಬೇಕು: ಸೈಯಾದ್ ಹುಸೇನ್ ಸಾಹೇಬ್

ಧೈರ್ಯದ ದಾರಿ

**ಮಾನ್ವಿ,ಜ.12**–ಪಟ್ಟಣದ ಪತ್ರಿಕಾ ಭವನದಲ್ಲಿ ಮೌಲಾನಾ ಅಬುಲ್ ಕಲಾಂ ಆಜಾದ್ ಬ್ರೀಗೆಡ್ ಜಿಲ್ಲಾಧ್ಯಕ್ಷರಾದ ಸೈಯಾದ್ ಹುಸೇನ್ ಸಾಹೇಬ್ ಮಾತನಾಡಿ ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ರವರು ನಮ್ಮ ದೇಶದ ಸ್ವಾಂತ್ರಕ್ಕಾಗಿ ಹೋರಾಟ ಮಾಡಿದವರು ಹಾಗೂ ಸ್ವಾತಂತ್ರ ನಂತರದಲ್ಲಿ ಕೇಂದ್ರದ ಮೋದಲ ಶಿಕ್ಷಣ ಸಚಿವರಾಗಿ ದೇಶದ ಶೈಕ್ಷಣಿಕ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದಾರೆ ಇವರ ಸಾಧನೆಯನ್ನು ಗುರುತಿಸಿದ ಯು.ಪಿ.ಐ.ಸರ್ಕಾರದ ಪ್ರಧಾನಿ ಮನಮೋಹನ್ ಸಿಂಗ್ ರವರು ನ.11 ರಂದು ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜಯಂತಿಯನ್ನು ಆಚರಿಸುವುದಕ್ಕೆ ಅದೇಶ ನೀಡಿದರು ಕೂಡ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅವರ ಜಯಂತಿಯನ್ನು ಆಚರಿಸುವುದಕ್ಕೆ ಮುಂದಾಗುತ್ತಿಲ್ಲ ಅವರ ಶಿಕ್ಷಣ ಕ್ಷೇತ್ರದಲ್ಲಿನ ಸಾಧನೆಯನ್ನು ಗೌರವಿಸುವ ಉದ್ದೇಶದಿಂದ ಪ್ರಾರಂಭಿಸಲಾದ ಮೌಲಾನಾ ಅಬುಲ್ ಕಲಾಂ ಆಜಾದ್ ಅಂಗ್ಲಮಾಧ್ಯಮ ಅಲ್ಪಸಂಖ್ಯಾತರ ಶಾಲೆಗಳಲ್ಲಿ ಅಗತ್ಯ ಮೂಲ




ಸೌಲಭ್ಯಗಳನ್ನು ಕಲ್ಪಿಸಬೇಕು, ಸಿರವಾರ ಪಟ್ಟಣ ಹಾಗೂ ಕವಿತಾಳ ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮುಸ್ಲಿಂ ಸಮುದಾಯದವರು ಇರುವುದರಿಂದ ಅಲ್ಲಿನ ಮಕ್ಕಳ ವಿದ್ಯಾಭ್ಯಸಕ್ಕೆ ಅಗತ್ಯವಿರುವ ಉರ್ದು ಪ್ರೌಢಶಾಲೆಗಳನ್ನು ಅಭಿವೃದ್ಧಿ ಪಡಿಸಬೇಕು. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿನ ಅಲ್ಪಸಂಖ್ಯಾತ ಸಮುದಾಯದವರ ಸಮಸ್ಯೆಗಳ ನಿವಾರಣೆಗಾಗಿ ಜಿಲ್ಲಾ ಮಟ್ಟದ ಬೃಹತ್ ಸಮವೇಶವನ್ನು ಮೌಲಾನಾ ಅಬುಲ್ ಕಲಾಂ ಆಜಾದ್ ಬ್ರೀಗೆಡ್ ವತಿಯಿಂದ ಹಮ್ಮಿಕೊಳ್ಳಲಾಗುವುದು.ಎಂದು ತಿಳಿಸಿದರು.

ಗೌರವಾಧ್ಯಕ್ಷರಾದ ಇಸ್ಮಾಯಿಲ್ ಸಾಬ್ ತಾ.ಅಧ್ಯಕ್ಷರಾದ ಜಮೀಲ್ ಇಸ್ಮಾಯಿಲ್, ಉಪಾಧ್ಯಕ್ಷ ಸೈಯಾದ್ ಸಲೀಂ ಪಾಷಾ ಕಾರ್ಯದರ್ಶಿ ಅಜ್ಮೀರ್ ಪಾಷಾ, ನಗರ ಘಟಕದ ಅಧ್ಯಕ್ಷರಾದ ನಸಿರುದ್ದಿನ್ ಚೌದ್ರಿ ಇದ್ದರು.

# ಕೋನಾಪುರ ಪೇಟೆಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸುವಂತೆ ಒಂದು ದಿನದ ಉಪವಾಸ ಸತ್ಯಾಗ್ರಹ: ಗುರುರಾಜ್ ನಾಗಲಾಪುರ್



ಧೈರ್ಯದ ದಾರಿ

**ಮಾನ್ವಿ,ಜ.12–** ಪಟ್ಟಣದ ಕೋನಾಪುರ ಪೇಟೆಯಲ್ಲಿನ ಅಂಬೇಡ್ಕರ್ ವೃತ್ತದಲ್ಲಿ ಉಪವಾಸ ಸತ್ಯಾಗ್ರಹವನ್ನು ನಡೆಸಿ ಸಮಾಜ ಸೇವಕರಾದ ಗುರುರಾಜ್ ನಾಗಲಾಪುರ್ ಮಾತನಾಡಿ ಪಟ್ಟಣದ ಚೀಕಲಪರ್ವಿ ರಸ್ತೆಯಲ್ಲಿ ಬರುವ ಕೋನಾಪುರ ಪೇಟೆ ಅಭಿವೃದ್ಧಿಯಲ್ಲಿ ವಂಚಿತವಾಗಿದ್ದು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು ಕೂಡ ಸಂಬಂದಿಸಿದ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಚೀಕಲಪರ್ವಿ ರಸ್ತೆಯಲ್ಲಿ ಪ್ರತಿದಿನ ಬಾರಿ ವಾಹನಗಳ ಸಂಚಾರ ದಿಂದಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದರಿಂದ ವಾಹನ ದಟ್ಟಣೆ ನಿವಾರಣೆಗಾಗಿ ಬೈಪಾಸ್ ರಸ್ತೆಯನ್ನು ನಿರ್ಮಾಣ ಮಾಡಬೇಕು. ವೈಜ್ಞಾನಿಕ ಹಂಪ್‌ಗಳನ್ನು ಅಳವಡಿಸಬೇಕು.ಕೋಮಾಪುರ ಪೇಟೆ ವೃತ್ತದಲ್ಲಿ ಪೊಲೀಸ್ ಸಿಬ್ಬಂದಿಗಳ ನೇಮಕಮಾಡಬೇಕು, ಸಿ.ಸಿ.ಕ್ಯಾಮಾರ ಅಳವಡಿಸಬೇಕು, ಪುರಸಭೆ ವತಿಯಿಂದ ಪ್ರತಿದಿನ ಶುದ್ದವಾದ ಕುಡಿಯುವ ನೀರಿನ ಪೂರೈಕೆಗಾಗಿ ಕ್ರಮ ಕೈಗೊಳ್ಳಬೇಕು. ರಸ್ತೆಯಲ್ಲಿ ದೂಳು ಬಾರದಂತೆ ಸ್ವಚ್ಚತೆ ಕೈಗೊಳ್ಳಬೇಕು ನೀರು ಸಿಂಪರಣೆ ಮಾಡಬೇಕು, ಪ್ರವಾಸಿ ಮಂದಿರದ ಹತ್ತಿರವಿರುವ ಸರ್ಕಾರಿ ಜಾಗದಲ್ಲಿ ಉದ್ಯಾನವನ ನೀರ್ಮಾಣ ಮಾಡಬೇಕು, ವಾಕೀಂಗ್ ಪಥ ನಿರ್ಮಾಣ ಮಾಡಬೇಕು, ಆರೋಗ್ಯ ಇಲಾಖೆಯಿಂದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೌಲಭ್ಯ ಕಲ್ಪಿಸುವುದಕ್ಕಾಗಿ ಖಾಲಿ ಇರುವ ತಜ್ಞ ವೈದ್ಯರ ಹಾಗೂ ಸಿಬ್ಬಂದಿಗಳ ಹುದ್ದೆಗಳನ್ನು ತುಂಬುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು, ಪುರಸಭೆ ವತಿಯಿಂದ ಐತಿಹಾಸಿಕ ಸಂಜೀವರಾಯ ದೇವಸ್ಥಾನದ ಹತ್ತಿರ ತ್ಯಾಜ್ಯ ಸುರಿಯುತ್ತಿರುವುದರಿಂದ ಭಕ್ತರಿಗೆ ಅನಾನುಕೂಲವಾಗುತ್ತಿದ್ದು ತ್ಯಾಜ್ಯ ಸಂಗ್ರಹ ಕೇಂದ್ರವನ್ನು ಸ್ಥಳಾಂತರ ಮಾಡಬೇಕು ಎಂದು ಒತ್ತಾಯಿಸಿದರು.

ಬೇಕು. ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ವಾಲ್ಮೀಕಿ ಸಂಘದ ಜಿಲ್ಲಾಧ್ಯಕ್ಷರಾದ ರಾಮಣ್ಣ ನಾಯಕ, ವಿಶ್ವನಾಥ ರಾಯಪ್ಪ ವಕೀಲರು, ಸುದರ್ಶನ ವಕೀಲರು, ಕೆ,ಶಿವುಕುಮಾರ, ಚಂದ್ರ ಜಾನೆಕಲ್, ವೆಂಕಟೇಶ್,ವೀರೇಶ ಬುರಾಂಪುರ, ಮಂಜುನಾಥ ನಾಯಕ, ಬೆಳಗಿನ ಪೇಟೆ, ಹನುಮೇಶ ನಾಯಕ, ವೀರೇಶ,ಶಿವಪ್ಪ, ಆನಿಲ್ ಗೌಡ, ರೇಣುಕಾ ರಾಜ್,ಸೇರಿದಂತೆ ಕೋನಾಪುರ ಪೇಟೆಯ ಮುಖಂಡರು,ಸಾರ್ವಜನಿಕರು ಭಾಗವಹಿಸಿದರು.

# ಜ.16 ರಂದು ಬೀದರ ಏರ್ ಶೋ

**ಬೀದರ, ಜ.12–** ಭಾರತೀಯ ವಾಯುಪಡೆ ಬೀದರ ವತಿಯಿಂದ ಬೀದರ ಕೋಟೆಯ ಆವರಣದ ಮೇಲೆ ದಿನಾಂಕ: 16–01–2026 ರಂದು ಮಧ್ಯಾಹ್ನ 3 ಗಂಟೆಗೆ ಬೀದರ್ ಏರ ಶೋ ಹಮ್ಮಿಕೊಳ್ಳಲಾಗಿದೆ. ಬೀದರ ಜಿಲ್ಲೆಯ ಎಲ್ಲಾ ಸಾರ್ವಜನಿಕರಿಗೆ ಬೀದರ ಏರ ಶೋ ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದ್ದು, ಮಧ್ಯಾಹ್ನ 3 ಗಂಟೆಯೊಳಗೆ ಸಾರ್ವಜನಿಕರು ಬೀದರ ಕೋಟೆಯ ಒಳಗಡೆ ನಿಗದಿತ ಸ್ಥಳದೊಳಗೆ ಉಪಸ್ಥಿತರಿದ್ದು, ಬೀದರ ಏರ್ ಶೋ ವೀಕ್ಷಿಸಬಹುದಾಗಿದೆ ಎಂದು ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವದೇಶಿ ಬಳಸಿ ದೇಶ ಬೆಳೆಸಿ ನಿವೃತ್ತ ಯೋಧರಿಂದ ಸ್ವದೇಶಿ ಜಾಗರಣ ಸೈಕಲ್ ಜಾಗೃತಿ ಜಾಥ




ಧೈರ್ಯದ ದಾರಿ

**ಮಾನ್ವಿ,ಜ.12–** ಶ್ರೀ ಪರಿಪೂರ್ಣ ಸಾನತನ ಚಾರಿಟಬಲ್ ಟ್ರಸ್ಟ್ ಹಾಗೂ ನಿವೃತ್ತ ಯೋಧರಿಂದ ಸ್ವದೇಶಿ ಜಾಗರಣ ಸೈಕಲ್ ಜಾಗೃತಿ ಜಾಥ ತಂಡದ ಸದಸ್ಯರು ಇಂದು ಪಟ್ಟಣಕ್ಕೆ ಆಗಮಿಸಿ ಕಾಕತೀಯ ಶಿಕ್ಷಣ ಸಂಸ್ಥೆಯ ವಸತಿ ನಿಲಯದ ಮಕ್ಕಳಿಗೆ ಜಾಗೃತಿ ಮೂಡಿಸಿ ಭಾರತೀಯ ಸೇನೆಯ ನಿವೃತ್ತ ಬ್ರಿಗೇಡಿಯರ್ ರವಿ ಮುನಿಸ್ವಾಮಿ ಮಾತನಾಡಿ ಶ್ರೀ ಪರಿಪೂರ್ಣ ಸಾನತನ ಚಾರಿಟಬಲ್ ಟ್ರಸ್ಟ್ ಹಾಗೂ ಮಾಜಿ ಯೋಧರಿಂದ ಜನರಲ್ಲಿ ಸ್ವದೇಶಿ ವಸ್ತುಗಳ ಬಳಕೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ನಿವೃತ್ತ ಭಾರತೀಯ ಸೇನೆಯ ಯೋಧರೊಂದಿಗೆ ಬೆಂಗಳೂರಿನ ನೆಲಮಂಗಲದಿಂದ ಸೈಕಲ್ ಜಾಗೃತಿ ಜಾಥವನ್ನು ಪ್ರಾರಂಭಿಸಿ ರಾಜ್ಯದ 22 ಜಿಲ್ಲೆಗಳಲ್ಲಿ ಒಟ್ಟು 2650 ಕಿ.ಮೀ.ದೂರವನ್ನು ಸೈಕಲ್ ಮೂಲಕ ಸಂಚಾರಿಸಿ ಮಾರ್ಗದಲ್ಲಿ ಬರುವ ತಾಲೂಕು ಹಾಗೂ ಗ್ರಾಮಗಳಲ್ಲಿನ ಜನರಿಗೆ ಹಾಗೂ ಶಾಲೆಗಳ ವಿದ್ಯಾರ್ಥಿಗಳಿಗೆ ಸ್ವದೇಶಿ ವಸ್ತುಗಳ ಬಳಕೆಯಿಂದ ದೇಶದ ಬೆಳವಣಿಗೆ ಯಾಗುತ್ತದೆ ಎನ್ನುವ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಇನ್ನು 10 ದಿನಗಳಲ್ಲಿ 7 ಜಿಲ್ಲೆಗಳಲ್ಲಿ ಸಂಚರಿಸಿ ಮರಳಿ ಬೆಂಗಳೂರಿನಲ್ಲಿ ಜಾಗೃತಿ ಜಾಥ ಮುಗಿಸಲಾಗುವುದು.

ನಮ್ಮ ದೇಶದಲ್ಲಿ ನಮ್ಮ ರೈತರು ಉತ್ಪದಿಸುವ ಆಹಾರ ಧಾನ್ಯಗಳನ್ನು ವಸ್ತುಗಳನ್ನು ,ಸ್ವದೇಶಿ ಉತ್ಪನ್ನಗಳನ್ನು ಬಳಸದೆ ಇದ್ದಲ್ಲಿ ನಮ್ಮ ರೈತರು,ಕಾರ್ಮಿಕರು ಉದ್ಯೋಗವನ್ನು ಕಳೆದುಕೊಳ್ಳುತ್ತಾರೆ. ವಿದೇಶಿ ವಸ್ತುಗಳನ್ನು ಹೆಚ್ಚಾಗಿ ಬಳಸುವುದರಿಂದ ನಮ್ಮ ಸಂಪತ್ತು ವಿದೇಶಗಳಿಗೆ ಸೇರುತ್ತದೆ. ನಮ್ಮ ವಸ್ತುಗಳನ್ನು ಬಳಸಿ ನಮ್ಮ ಸಂಪತ್ತು ನಮ್ಮಲಿ ಉಳಿಸಿಕೊಳೋಣ ಎನ್ನುವ ಉದ್ದೇಶದಿಂದ ದೇಶದ ಪ್ರಾಧಾನಿಗಳು ಮೇಕ್ ಇನ್ ಇಂಡಿಯ ಪರಿಕಲ್ಪನೆಯನ್ನು ನಮಗೆ ನೀಡಿದ್ದಾರೆ ನಾವು ಹೋರಾಟದಿಂದ ಗಳಿಸಿದ ಸ್ವಾತಂತ್ರ ದ ರಕ್ಷಣೆಗಾಗಿ ನಮ್ಮ ದೇಶದ ಗಡಿಯಲ್ಲಿ ಯೋಧರು ಹಗಲಿರುಳು ಶ್ರಮಿಸುತ್ತಿದ್ದಾರೆ. ಅದ್ದರಿಂದ ನಮ್ಮಗೆ ಅಗತ್ಯವಿರುವ ವಸ್ತುಗಳನ್ನು ನಾವೆ ತಯಾರಿಸಿಕೊಂಡು ಬಳಸಿಕೊಳೋಣ ನಮ್ಮ ಆರ್.ಬಿ.ಐ.ರೂಪಿಸಿದ ಭಾರತ ಆಫ್,ಭಿಮ ಆಪ್ ಬಳಸೋಣ ಎಂದು ಕರೆ ನೀಡಿದರು.

ನಿವೃತ್ತ ಉಪಕಾರ್ಯದರ್ಶಿ ರಮೇಶ ನರಸಿಂಹ, ನಿವೃತ್ತ ಭಾರತೀಯ ಸೇನೆಯ ಅಧಿಕಾರಿ ಕರ್ನಾಲ್ ಖಂಡಸ್ವಾಮಿ, ಕಾಮೆಂಡರ್ ನಿಲಕಂತ,ಡಾ.ಗೋಪಾಲಕೃಷ್ಣ ಪಿಳ್ಳೈ,ಕ್ಯಾಪ್ಟನ್ ಡಾ.ನೆಡುನಚಿಜೀಯನ್, ಸಹಸ್ರನಾಮಮಿಯಾರ್, ಬಾಬು ಕಮಲಕಾರ್ , ವಾಣಿಜ್ಯೋದ್ಯಮಿ ಹೆಮಂತ್ ಜಾದವ್, ಸಿವೀಲ್ ಇಂಜಿನಿಯರ್ ಸಾಗರ್ ದೇವರಾಜ, ರವರ ತಂಡದಿಂದ ಸೈಕಾಲ್ ಜಾಥ ಮೂಲಕ ಸ್ವದೇಶಿ ಬಳಸಿ ದೇಶಬೆಳೆಸಿ ಎನ್ನುವ ಘೋಷ ವಾಕ್ಯದೊಂದಿಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಡೆಯಿತು.

ಕಕಾತೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಗೋಡವರ್ತಿ ಸತ್ಯನಾರಾಯಣ, ಕಾರ್ಯದರ್ಶಿ ಜಿ. ಶ್ರೀನಿವಾಸ, ಸುಬ್ಬರಾವ್ ಚೌದ್ರಿ,ಉಪಾಧ್ಯಕ್ಷರಾದ ಪುಟ್ಟಪ್ರಸಾದ್, ಎಂ.ಆರ್.ರಾಜು, ಪಣಿಕುಮಾರ, ನಾಗೇಶ್ವರರಾವ್, ದೊರೆಬಾಬು, ಬಿ.ಟಿ. ಸತ್ಯನಾರಾಯಣ, ಜಿ,ಶ್ರೀನಿವಾಸ, ಎಸ್.ರಮೇಶ, ಪಂಡು, ಕಕಾತೀಯ ಶಾಲೆಯ ಮುಖ್ಯಗುರು ವೀರಭದ್ರಗೌಡ ಸೇರಿದಂತೆ ವಸತಿ ಶಾಲೆಯ ವಿದ್ಯಾರ್ಥಿಗಳು ಇದ್ದರು.

# ಇತಿಹಾಸ ಬರೆದ ರಾಯಚೂರು ಮಹಾನಗರ ಪಾಲಿಕೆಯ ಸ್ವಚ್ಛತಾ ಓಟ

ಧೈರ್ಯದ ದಾರಿ

**ರಾಯಚೂರು,ಜ.12**–ಸ್ವಚ್ಛ ಭಾರತ ಮಿಷನ್ ಹಾಗೂ ರಾಯಚೂರು ಉತ್ಸವ–2026ರ ಅಂಗವಾಗಿ ಜನವರಿ 12ರಂದು ರಾಯಚೂರು ಮಹಾನಗರ ಪಾಲಿಕೆ ಹಾಗೂ ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ ಸ್ವಚ್ಛತಾ ಓಟ ಭವ್ಯವಾಗಿ ನಡೆಯಿತು.

ಸಚಿವರು, ಸಂಸದರು, ಶಾಸಕರ ಮಾರ್ಗದರ್ಶ ದಡಿಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ವಿಶೇಷವಾಗಿ ರೂಪಿಸಿದ ಈ ಸ್ವಚ್ಛತಾ ಓಟವು ಯುವಜನತೆಗೆ ಹೊಸ ಶಕ್ತಿ, ಪ್ರೇರಣೆ ಹಾಗೂ ಜಾಗೃತಿ ನೀಡಿತು. ರಾಯಚೂರು ಜನತೆಯಲ್ಲಿ ತಮ್ಮ ನಗರವನ್ನು ಸ್ವಚ್ಛ, ಸುಂದರ ಹಾಗೂ ಆರೋಗ್ಯಕರವಾಗಿಸುವ ಸಂಕಲ್ಪವನ್ನು ಮತ್ತಷ್ಟು ಬಲಪಡಿಸಿತು.

ಕಾರ್ಯಕ್ರಮಕ್ಕೆ ಸಂಸದರಾದ ಜಿ. ಕುಮಾರ್ ನಾಯಕ್ ಅವರು ನೇತೃತ್ವ ವಹಿಸಿ ಸ್ವಚ್ಛತಾ ಓಟಕ್ಕೆ ಚಾಲನೆ ನೀಡಿದರು. ಈ ವೇಳೆ ಸಂಸದರು ಮಾತನಾ ಡಿ, ಸ್ವಾಮಿ ವಿವೇಕಾನಂದರ ಮೌಲ್ಯಗಳು, ಸದೃಢ ಶರೀರ ಮತ್ತು ಮನಸ್ಸಿನ ಮಹತ್ವ ಮತ್ತು ಸ್ವಚ್ಛ, ಆರೋಗ್ಯಕರ ವಾತಾವರಣ ನೆನಪಿಸಿದರು.

ಸ್ವಚ್ಛತಾ ಓಟದಲ್ಲಿ 3000ಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ಶಾಲಾ ವಿದ್ಯಾರ್ಥಿಗಳಿಂದ– 65ರ ವಯೋಮಾನದವರು ಓಟದಲ್ಲಿ ಕಂಡು ಬಂದರು. ವಿದ್ಯಾರ್ಥಿಗಳು, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗ ಳ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿ ಗಳು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡರು. ರಾಯಚೂರು ಇತಿಹಾಸದಲ್ಲೇ ಮೊದಲ ಬಾರಿಗೆ



ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಜನರು ಮ್ಯಾರಥಾನ್ ಓಟಕ್ಕೆ ಸ್ವಯಂಪ್ರೇರಿತವಾಗಿ ಭಾಗವಹಿಸಿದ್ದು ಮಹತ್ವದ ಸಾಧನೆಯಾಗಿ ರಾಯ ಚೂರು ಇತಿಹಾಸದಲ್ಲಿ ದಾಖಲಾಯಿತು.

ಈ ಸ್ವಚ್ಛತಾ ಓಟವು ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು, ಪರಿಸರ ಸಂರಕ್ಷಣೆ, ಆರೋಗ್ಯಕರ ಜೀವನ ಶೈಲಿ ಹಾಗೂ ಪಾಲಿಕೆಯೊಂದಿಗೆ ನಾಗರಿಕರ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಿದೆ. ಕಾರ್ಯ ಕ್ರಮಕ್ಕೆ ದೊರೆತ ವ್ಯಾಪಕ ಜನಬೆಂಬಲಕ್ಕೆ ಸಾರ್ವ ಜನಿಕರು ಸರ್ಕಾರ ಹಾಗೂ ಮಹಾನಗರ ಪಾಲಿಕೆ ಯ ಈ ಮಹತ್ವದ ಮುಂದಾಳತ್ವಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು. ಈ ಸ್ವಚ್ಛತಾ ಓಟದ ಮೂಲಕ ರಾಯಚೂರು ಜನತೆ ತಮ್ಮ ನಗರಕ್ಕಾಗಿ ಹೊಂದಿ ರುವ ಜವಾಬ್ದಾರಿ, ಒಗ್ಗಟ್ಟು ಮತ್ತು ಅಪಾರ ಶಕ್ತಿಯನ್ನು ಸ್ಪಷ್ಟವಾಗಿ ಪ್ರದರ್ಶಿಸಿದರು. ವಿಭಿನ್ನ ವಯೋಮಾನದವರು, ಹಿನ್ನೆಲೆಯವರು ಹಾಗೂ ವೃತ್ತಿಯವರು ಒಂದೇ ಗುರಿಗಾಗಿ ಒಟ್ಟಾಗಿ ಭಾಗವಹಿಸಿರುವುದು, ರಾಯಚೂರು ಒಂದು ಜಾಗೃತ, ಹಾಗೂ ಚೈತನ್ಯಭರಿತ ನಗರ ಎಂಬುದನ್ನು ಸಾಬೀತುಪಡಿಸಿತು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಮಾನವ ಸರಪಳಿಯನ್ನು "ರಾಯಚೂರು ಉತ್ಸವ–2026" ಎಂಬ ರೂಪದಲ್ಲಿ ವಿನ್ಯಾಸಗೊಳಿಸಲಾಗಿದ್ದು, ಅದ ನ್ನು ಡ್ರೋನ್ ಮೂಲಕ ಚಿತ್ರೀಕರಿಸಲಾಯಿತು. ಈ ದೃಶ್ಯವು ರಾಯಚೂರು ಉತ್ಸವಕ್ಕೆ ಮತ್ತಷ್ಟು ಉತ್ಸಾಹ ಮತ್ತು ಜೋಷ್ ನೀಡಿತು.

ಈ ಮೂಲಕ ರಾಯಚೂರು ನಗರವು ಒಗ್ಗಟ್ಟಿನ ಶಕ್ತಿ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಮುಂದಿನ ಹೆಜ್ಜೆ ಇಡುತ್ತಿದೆ ಎಂಬ ಸಂದೇಶ ಸ್ಪಷ್ಟವಾಗಿ ಮೂಡಿಬಂದಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾಂವತಗೇರಿ, ಪಾಲಿಕೆಯ ಜೊನಲ್ 1ರ ಆಯುಕ್ತರಾದ ಪುಲಮ್ ಸಿಂಗ್, ಉಪ ಆಯುಕ್ತರಾದ ಸಂತೋಷ ರಾಣಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ಅರಕೇರಾ ತಹಶಿಲ್ದಾರ್ ಅಮರೇಶ ಬಿರಾದಾರ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಓಟದಲ್ಲಿ ಭಾಗಿಯಾದರು. ಮುಖಂಡರಾದ ರವಿ ಭೋಸರಾಜ್, ಜಯಣ್ಣ ಸೇರಿದಂತೆ ಜಿಲ್ಲೆಯ ಅನೇಕ ಗಣ್ಯಮಾನ್ಯರು ಭಾಗಿಯಾಗಿ ಸ್ವಚ್ಛತಾ ಓಟಕ್ಕೆ ಸ್ಫೂರ್ತಿ ನೀಡಿದರು.

# ಪ್ರಬುದ್ಧ ಅಕಾಡೆಮಿಯಲ್ಲಿ ಈ ಭಾಗದ ಪ್ರತಿಭಾವಂತಅಭ್ಯರ್ಥಿಗಳ ಭವಿಷ್ಯ ಅರಳಲಿ, ಕನಸು ನನಸಾಗಲಿ: ಸಚಿವ ಪ್ರಿಯಾಂಕ್ ಖರ್ಗೆ



**ಕಲಬುರಗಿ, ಜ 12:** ಕಲ್ಯಾಣ ಕರ್ನಾಟಕ ಭಾಗದ ಪ್ರತಿಭಾವಂತ ಅಭ್ಯರ್ಥಿಗಳು ಐಎಎಸ್, ಐಪಿಎಸ್ ಹಾಗೂ ಕೆಎಎಸ್ ಸೇರಿದಂತೆ ಇತರೆ ಸ್ಪರ್ಧಾತ್ಮಕ ಪರೀಕ್ಷೆಗೆ ಬೇಕಾಗುವ ಅಗತ್ಯ ತರಬೇತಿ ನೀಡುವ ಕನಸು ಇಂದು ನನಸಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಎಂದು ಹರ್ಷ ವ್ಯಕ್ತಪಡಿಸಿದರು.

ಕಲಬುರಗಿ ನಗರದ ಹೊರವಲಯದ ವಾಜಪೇಯಿ ಬಡಾವಣೆಯಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಪ್ರಬುದ್ಧ ಪರೀಕ್ಷಾ ಪೂರ್ವ ತರಬೇತಿ ಅಕಾಡೆಮಿ ( ಕೇಂದ್ರ ) ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ನಾವು ಈ ಹಿಂದೆ ಸಮಾಜ ಕಲ್ಯಾಣ ಸಚಿವರಾಗಿದ್ದಾಗ ಈ ಕೇಂದ್ರಕ್ಕೆ ಯೋಜನೆ ರೂಪಿಸಲಾಗಿತ್ತು. ಆದರೆ ನಮ್ಮ ಸರ್ಕಾರ ಅಧಿಕಾರ ಕಳೆದುಕೊಂಡಿತ್ತು. ಮಕ್ಕಳ ವಿದ್ಯಾಭ್ಯಾಸ, ಉದ್ಯೋಗ ಹಾಗೂ ಭವಿಷ್ಯದ ವಿಚಾರದಲ್ಲಿ ಯಾರೂ ರಾಜಕೀಯ ಮಾಡಬಾರದು. ಆದರೆ, ನಮ್ಮ ನಂತರ ಅಧಿಕಾರಕ್ಕೆ ಬಂದ ಸರ್ಕಾರ ಈ ಕೇಂದ್ರದ ಕಾಮಗಾರಿ ಕೈಗೊಳ್ಳಲಿಲ್ಲ. ಆದರೆ, ಈಗ ನಾವೇ ಮತ್ತೆ ಅಧಿಕಾರಕ್ಕೆ ಬಂದಿದ್ದೇವೆ. ಸುಮಾರು 10,000 ಚದರ ಅಡಿಯಲ್ಲಿ ರೂ 30 ಕೋಟಿ ವೆಚ್ಚದಲ್ಲಿ ಅಕಾಡೆಮಿ ನಿರ್ಮಾಣವಾಗಿದೆ. ಈಗ ನಾವೇ ಈ ಕೇಂದ್ರ ಉದ್ಘಾಟನೆ ಮಾಡಿದ್ದೇವೆ. ಇದು ನಮ್ಮ ಬದ್ಧತೆಯಾಗಿದೆ ಎಂದರು.

ತಾವು ಸಮಾಜ ಕಲ್ಯಾಣ ಸಚಿವರಾಗಿದ್ದಾಗ ಪ್ರಬುದ್ಧ ಯೋಜನೆಯಡಿಯಲ್ಲಿ ವಿದ್ಯಾರ್ಥಿಯೊಬ್ಬರಿಗೆ ಸರ್ಕಾರದಿಂದ ವಿದ್ಯಾರ್ಥಿ ವೇತನ ನೀಡಿದ್ದರಿಂದ ಅವರು ವಿದೇಶದಲ್ಲಿ ವಿದ್ಯಾಭ್ಯಾಸ ಮಾಡಿ ಭಾರತದಲ್ಲಿ ಬಂದು ಪ್ರತಿಷ್ಠಿತ ಕಂಪನಿಯಲ್ಲಿ ಕೆಲಸ ಪಡೆದುಕೊಂಡ ಬಗ್ಗೆ ನೆನಪಿಸಿಕೊಂಡ ಪ್ರಿಯಾಂಕ್ ಖರ್ಗೆ, ಪ್ರಬುದ್ಧ ಅಕಾಡೆಮಿಯಲ್ಲಿ ತರಬೇತಿ ಪಡೆದುಕೊಂಡ ಅಭ್ಯರ್ಥಿಗಳು ಉನ್ನತ ಹುದ್ದೆಗಳನ್ನು ಹೊಂದಿ ನಾಡಿಗೆ ಹೆಸರು ತರಲಿ ಎಂದು ಹರಸಿದರು.

ಅಕಾಡೆಮಿ ಕೇವಲ ಕಟ್ಟಡವಲ್ಲ. ಇದರಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳ ಭವಿಷ್ಯ ಅಡಗಿದೆ. ಅವರ ಕನಸುಗಳು ಇಲ್ಲಿ ಸಾಕಾರಗೊಳ್ಳಲಿವೆ. ಈ ಹಿಂದೆ ಪಿಎಸ್ಐ ಪರೀಕ್ಷೆಯಲ್ಲಿ ಅಕ್ರಮ ನಡೆದಾಗ ಅದರಿಂದ ತೊಂದರೆಗೊಳಗಾದ ವಿದ್ಯಾರ್ಥಿಗಳ ಒಂದು ಹೊತ್ತಿನ ಊಟಕ್ಕೆ ಪರದಾಡುವಂತಾಗಿತ್ತು. ತರಬೇತಿ ಪಡೆಯಲು ಬೆಂಗಳೂರಿಗೆ ಬಂದಿದ್ದ ವಿದ್ಯಾರ್ಥಿಗಳು " ಮೂರು ನಾಲ್ಕು ಅನ್ನ ಹಾಕು" ಎಂದು ವಾಟ್ಸಪ್ ಗ್ರೂಪ್ ಮಾಡಿಕೊಂಡು ಬೆಂಗಳೂರಿನಲ್ಲಿ ಎಲ್ಲೆಲ್ಲಿ ಉಚಿತ ಊಟ ಸಿಗುತ್ತದೆ ಎಂದು ಮಾಹಿತಿ ಹಂಚಿಕೊಂಡು ಛತ್ರಗಳ ವಿವರ ಹಾಕಿ ಅಲ್ಲಿ ಊಟ ಮಾಡಿಕೊಂಡು ಬರುತ್ತಿದ್ದರು. ಆ ದೃಶ್ಯ ನನ್ನ ಕಣ್ಣಮುಂದೆ ಬಂದು, ಕಣ್ಣೀರು ಬರುವಂತಾಗಿತ್ತು. ಅಂತಹ ಯಾವುದೇ ಸ್ಥಿತಿ ನಮ್ಮ ಭಾಗದ ಮಕ್ಕಳಿಗೆ ಬಾರದಿರಲಿ ಎಂದು ಕಲಬುರಗಿಯಲ್ಲಿ ಪ್ರಬುದ್ಧ ಅಕಾಡೆಮಿ ಕೇಂದ್ರ ಸ್ಥಾಪನೆಗೆ ಒತ್ತು ನೀಡಿದ್ದೆ ಎಂದು ಪ್ರಿಯಾಂಕ್ ಖರ್ಗೆ ನೆನಪಿಸಿಕೊಂಡು ಭಾವುಕರಾದರು.

ಪ್ರಬುದ್ಧ ಅಕಾಡೆಮಿ ಒಂದು ಉತ್ಕೃಷ್ಟ ತರಬೇತಿ ಕೇಂದ್ರವಾಗಿ ಬಲಗೊಳ್ಳಬೇಕು ಎಂದು ಅಭಿಪ್ರಾಯಪಟ್ಟ ಸಚಿವರು, ಈ ಭಾಗದ ಐಎಎಸ್ ಅಧಿಕಾರಿಗಳು ಇಲ್ಲಿನ ಅಭ್ಯರ್ಥಿಗಳಿಗೆ ಪಾಠ ಮಾಡಲು ಮುಂದೆ ಬರಬೇಕು. ಅದಕ್ಕೆ ಅನುಕೂಲವಾಗುವಂತೆ ರೋಸ್ಟರ್ ಪದ್ಧತಿ ರೂಪಿಸಿ ಎಂದು ವೇದಿಕೆಯ ಮೇಲಿದ್ದ ಅಧಿಕಾರಿಗಳಿಗೆ ಸಲಹೆ ನೀಡಿದರು.

ಅಕಾಡೆಮಿಗೆ ಅಭ್ಯರ್ಥಿಗಳು ಬಂದು ಹೋಗಲು ಕೆಕೆಆರದಟಿಸಿ ವತಿಯಿಂದ ಎರಡು ಸಿಟಿಬಸ್ ಗಳ ಸೇವೆಯನ್ನು ಇಂದಿನಿಂದಲೆ ಒದಗಿಸಲಾಗುತ್ತಿದೆ. ಜೊತೆಗೆ ನಿವೃತ್ತ ಪ್ರೊ ಫೆಸರ್ ಗಳು ಕೂಡಾ ಇಲ್ಲಿನ ಅಭ್ಯರ್ಥಿಗಳಿಗೆ ಉಚಿತ ತರಬೇತಿ ನೀಡಲು ಮುಂದೆ ಬಂದಿದ್ದಾರೆ. ಈಗಾಗಲೇ 10,000 ಅಭ್ಯರ್ಥಿಗಳು ಕೆಇಎ ಮೂಲಕ ಪರೀಕ್ಷೆ ಎದುರಿಸಿದ್ದಾರೆ. ಅವರಲ್ಲಿ ಮೆರಿಟ್ ಆಧಾರದ ಮೇಲೆ 500 ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಅವರಿಗೆ ತರಬೇತಿ ನೀಡಲಾಗುತ್ತದೆ. ಅವರೆಲ್ಲರಿಗೂ ಒಳ್ಳೆಯದಾಗಲಿ ಎಂದು ಪ್ರಿಯಾಂಕ್ ಖರ್ಗೆ ಹಾರೈಸಿದರು.

ಸಚಿವ ಡಾ ಶರಣಪ್ರಕಾಶ ಪಾಟೀಲ್ ಮಾತನಾಡಿ ನಮ್ಮ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೂಕ್ತ ತರಬೇತಿ ನೀಡುವ ಕೇಂದ್ರದ ಕೊರತೆ ಇತ್ತು. ಆ ಕೊರತೆಯನ್ನು ಪ್ರಬುದ್ಧ ಅಕಾಡೆಮಿ ನೀಗಿಸಲಿದೆ ಎಂದರು.

ಬೆಂಗಳೂರು ಸೇರಿದಂತೆ ಇತರೆ ಮೆಟ್ರೋ ನಗರಗಳಲ್ಲಿ ಐಎಎಸ್, ಐಪಿಎಸ್, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಲು ಅಭ್ಯರ್ಥಿಗಳಿಗೆ ಅವಕಾಶಗಳಿವೆ. ಆದರೆ, ಈ ಭಾಗದಲ್ಲಿ ಅಂತಹ ಅವಕಾಶಗಳಿರಲಿಲ್ಲ. ಪ್ರಬುದ್ಧ ಅಕಾಡೆಮಿ ಮೂಲಕ ಅಭ್ಯರ್ಥಿಗಳು ಅಗತ್ಯ ತರಬೇತಿ ಪಡೆಯಲು ಅನುಕೂಲವಾಗಲಿದೆ ಎಂದರು.

ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ಕೆಲಸದಲ್ಲಿರುವ ಐಎಎಸ್ ಹಾಗೂ ಐಪಿಎಸ್ ಅಧಿಕಾರಿಗಳು ಬಿಡುವು ಮಾಡಿಕೊಂಡು ಬಂದು ಇಲ್ಲಿನ ಅಭ್ಯರ್ಥಿಗಳಿಗೆ ಪಾಠಮಾಡಿ, ಪರೀಕ್ಷೆಗಳನ್ನು ಹೇಗೆ ಎದುರಿಸಬೇಕು ಎನ್ನುವ ಅನುಭವ ಹೇಳಿದರೆ ಅವರಿಗೂ ಅನುಕೂಲವಾಗಲಿದೆ ಎಂದು ಸಲಹೆ ನೀಡಿದರು.

ವಿಧಾನಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು ಮಾತನಾಡಿ ಹಿರಿಯ ನಾಯಕ ಮಲ್ಲಕಾರ್ಜುನ ಖರ್ಗೆ ಅವರು ಕಲಬುರಗಿ ಜಿಲ್ಲೆಗೆ ಹಲವಾರು ಪ್ರಮುಖ ಯೋಜನೆಗಳನ್ನು ತಂದಿದ್ದಾರೆ. ಆರ್ಟಿಕಲ್ 371(ಎ), ಇಎಸ್ಐ, ಕೇಂದ್ರಿಯ ವಿದ್ಯಾಲಯ, ಪೊಲೀಸ್ ತರಬೇತಿ ಕೇಂದ್ರ, ಪೊಲೀಸ್ ವಲಯ ಕಚೇರಿ ಹಾಗೂ ಇತರ ಪ್ರಮುಖ ಯೋಜನೆಗಳನ್ನು ಅವರು ತಂದಿದ್ದಾರೆ. ಈಗ ಅವರ ಮಗ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಈ ಭಾಗದ ವಿದ್ಯಾರ್ಥಿಗಳಿಗೆ ಉತ್ಕೃಷ್ಟ ಗುಣಮಟ್ಟದ ತರಬೇತಿ ನೀಡಲು ಪ್ರಬುದ್ಧ ಅಕಾಡೆಮಿ ತಂದಿದ್ದಾರೆ. ಅವರೊಂದಿಗೆ ಮತ್ತೊಬ್ಬ ಸಚಿವ ಶರಣಪ್ರಕಾಶ ಪಾಟೀಲ ಕೈ ಜೋಡಿಸಿದ್ದಾರೆ. ಇವರಿಬ್ಬರು ಜಿಲ್ಲೆಗೆ ನಕ್ಷತ್ರಗಳಿದ್ದಂತೆ. ಸಾವಿರಾರು ಕೋಟಿ ವೆಚ್ಚಗಳ ಯೋಜನೆ ಜಾರಿಗೆ ತಂದಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಅಲ್ಲಮಪ್ರಭು ಪಾಟೀಲ ಅವರು ವಹಿಸಿ ಮಾತನಾಡಿ ಇಲ್ಲಿನ ಯುವಕರು ಈ ಅವಕಾಶವನ್ನು ಬಳಸಿಕೊಂಡು ಒಳ್ಳೆಯ ಉದ್ಯೋಗ ಪಡೆಯುವ ಮೂಲಕ ಜಿಲ್ಲೆಗೆ ಒಳ್ಳೆಯ ಹೆಸರು ತರುವಂತೆ ಹಾರೈಸಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಎಂ. ವೈ.ಪಾಟೀಲ, ವಿಧಾನಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ, ಕುರಿ ಮತ್ತು ಉಣ್ಣೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ದೇವಿಂದ್ರಪ್ಪ ಮರತೂರು, ಕೆಕೆಆರ್ ಟಿಸಿ ಅಧ್ಯಕ್ಷ ಅರುಣಕುಮಾರ್ ಎಂ ವೈ ಪಾಟೀಲ, ಜೆಸ್ಕಾಂ ಅಧ್ಯಕ್ಷ, ಪ್ರವೀಣ್ ಪಾಟೀಲ ಹರವಾಳ, ಕರ್ನಾಟಕ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ಸೈಯದ್ ಮಹೆಮೂದ್ ಚಿಸ್ತಿ ಸಾಹೇಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಕೆಕೆಆರ್ ಡಿಬಿ ಕಾರ್ಯದರ್ಶಿ ನಲೀನ್ ಅತುಲ್, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಸಿಇಓ ಭಂವರ್ ಸಿಂಗ್ ಮೀನಾ, ನಗರ ಪೊಲೀಸ್ ಕಮೀಷನರ್ ಡಾ ಶರಣಪ್ಪ ಎಸ್ ಡಿ, ಎಸ್ ಪಿ ಅಡ್ಡೂರು ಶ್ರೀನಿವಾಸಲು, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ಚಂದ್ರಶೇಖರ ಸೇರಿದಂತೆ ವಿದ್ಯಾರ್ಥಿಗಳು, ನಾಗರಿಕರು ಉಪಸ್ಥಿತರಿದ್ದರು.

## ಅಗ್ನಿ ಅವಘಡವಾದ ಅಂಗಡಿಗಳಿಗೆ ಶಾಸಕ ಚವ್ಹಾಣ ಭೇಟಿನೊಂದ ಅಂಗಡಿ ಮಾಲೀಕರಿಗೆ ಧೈರ್ಯ ತುಂಬಿದ ಶಾಸಕ ಚವ್ಹಾಣ

**ಔರಾದ್ :ಜ.12:** ಪಟ್ಟಣದ ಬಸ್ ನಿಲ್ದಾಣದ ಎದುರಿಗೆ ಇರುವ ಅಂಗಡಿಗಳಿಗೆ ಅಗ್ನಿ ಅವಘಡ ಸಂಭವಿಸಿದ ಸ್ಥಳಕ್ಕೆ ರವಿವಾರ ಶಾಸಕ ಪ್ರಭು ಚವ್ಹಾಣ ಅವರು ಭೇಟಿ ನೀಡಿ ಪರಿಶೀಲಿಸಿ ನೊಂದ ಅಂಗಡಿ ಮಾಲೀಕರಿಗೆ ಧೈರ್ಯ ತುಂಬಿದರು.



ಬೆಂಕಿಗೆ ಆಹುತಿಯಾದ ಭಾಂಡೆ ಅಂಗಡಿಗಳು, ಫರ್ನಿಚರ್ ಅಂಗಡಿ, ಚಪ್ಪಲಿ ಅಂಗಡಿ, ಕಿರಾಣಾ ಸ್ಟೋರ್, ತರಕಾರಿ ಮಳಿಗೆ ಸೇರಿದಂತೆ ಎಲ್ಲ ಅಂಗಡಿಗಳಿಗೆ ಖುದ್ದಾಗಿ ವೀಕ್ಷಿಸಿ ಹಾನಿ ಪ್ರಮಾಣವನ್ನು ತಿಳಿದುಕೊಂಡರು. ನಸುಕಿನ ವೇಳೆ ಅಂಗಡಿಗಳಿಗೆ ಬೆಂಕಿ ತಗುಲಿದೆ. ನಂತರ ಒಂದೊಂದಾಗಿ ಎಲ್ಲ ಮಳಿಗೆಗೆ ಬೆಂಕಿ ಆವರಿಸಿಕೊಂಡು 11 ಅಂಗಡಿಗಳು ಸುಟ್ಟು ಹೋಗಿವೆ. ಆ ಸಂದರ್ಭದಲ್ಲಿ ಒಂದೇ ಅಗ್ನಿಶಾಮಕ ವಾಹನ ಬಂದಿದೆ. ಅದರಲ್ಲಿ ಅರ್ಧ ಟ್ಯಾಂಕ್ ಮಾತ್ರ ನೀರಿತ್ತು. ಇದರಿಂದಾಗಿ ಸಮಯಕ್ಕೆ ಬೆಂಕಿ ನಂದಿಸಲು ಸಾಧ್ಯವಾಗಿಲ್ಲ ಎಂದು ನೊಂದ ಅಂಗಡಿಗಳ ಮಾಲೀಕರು ಶಾಸಕರೆದುರು ತಮ್ಮ ನೋವುಗಳನ್ನು ತೋಡಿಕೊಂಡರು. ಅಗ್ನಿ ಅವಘಡದ ಬಗ್ಗೆ ತಹಸೀಲ್ದಾರರು ಶಾಸಕರಿಗೆ ಮಾಹಿತಿ ನೀಡಿದರು.

ಈ ವೇಳೆ ಶಾಸಕರು ಜಿಲ್ಲಾಧಿಕಾರಿಯನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ, ಔರಾದನಲ್ಲಿ ಸಂಭವಿಸಿರುವ ಅಗ್ನಿ ಅವಘಡದಲ್ಲಿ 11 ಅಂಗಡಿಗಳು ಸುಟ್ಟು ಭಸ್ಮವಾಗಿವೆ. ಕುರ್ಚಿ, ಸೋಫಾ, ಭಾಂಡೆ, ಚಪ್ಪಲಿ, ತರಕಾರಿ ಅಂಗಡಿಗಳು ಸುಟ್ಟು ಹೋಗಿವೆ. ಅವುಗಳಲ್ಲಿ ಅಪಾರ ಪ್ರಮಾಣದ ಸಾಮಾನುಗಳಿದ್ದವು. ಅಂಗಡಿಯಲ್ಲಿ ತುಂಬಿದ್ದ ಎಲ್ಲ ಸಾಮಾನುಗಳು ಬೆಂಕಿಗಾಹುತಿಯಾಗಿವೆ. ಅಂಗಡಿ ಮಾಲೀಕರು ಸಾಕಷ್ಟು ನೋವಿನಲ್ಲಿದ್ದಾರೆ. ಅವರಿಗೆ ಸರ್ಕಾರದಿಂದ ಹೆಚ್ಚಿನ ನೆರವು ಕಲ್ಪಿಸಲು ನಾನು ಪ್ರಯತ್ನ ವಹಿಸುತ್ತಿದ್ದೇನೆ. ತಾವು ಕೂಡ ತಮ್ಮ ಹಂತದಲ್ಲಿ ಆಗುವ ಎಲ್ಲ ರೀತಿಯ ಸಹಾಯ ಸಹಕಾರ ನೀಡಬೇಕೆಂದು ತಿಳಿಸಿದರು. ಅಲ್ಲದೇ ಬೀದ???ನಿಂದ ಅಗ್ನಿಶಾಮಕ ವಾಹನ ಬಂದಿದೆ. ಆದರೆ ಔರಾದ ಅಗ್ನಿಶಾಮಕ ವಾಹನಗಳು ಸಮಯಕ್ಕೆ ಬಂದಿಲ್ಲ. ಅಗ್ನಿಶಾಮಕ ಅಧಿಕಾರಿಗಳು ಸರಿಯಾಗಿ ಸ್ಪಂದಿಸಿಲ್ಲವೆಂದು ಜನತೆ ಹೇಳುತ್ತಿದ್ದಾರೆ. ಈ ಬಗ್ಗೆ ತನಿಖೆ ನಡೆಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕೆಂದು ಹೇಳಿದರು.

ತಹಸೀಲ್ದಾರರು, ಕಂದಾಯ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿ ನೊಂದ ವ್ಯಾಪಾರಿಗಳಿಗೆ ನೆರವಾಗುವ ರೀತಿಯಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ಸರ್ಕಾರದಿಂದ ಹೆಚ್ಚಿನ ಪರಿಹಾರ ಕಲ್ಪಿಸಲು ನೆರವಾಗಬೇಕು ಎಂದು ನಿರ್ದೇಶನ ನೀಡಿದರು. ಜೆಸ್ಕಾಂ ಅಧಿಕಾರಿಗಳು ಪಟ್ಟಣದಲ್ಲಿ ಸಂಚರಿಸಿ ವಿದ್ಯುತ್ ಕಂಬಗಳು ಮತ್ತು ತಂತಿಗಳನ್ನು ಗಮನಿಸಬೇಕು. ವಿದ್ಯುತ್ ಅವಘಡಗಳನ್ನು ತಪ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ಜೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರವಿ ಕಾರಬಾರಿ, ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ರಾಮಶೆಟ್ಟಿ ಪನ್ನಾಳೆ, ಶಿವರಾಜ ಅಲ್ಮಾಜೆ, ದಯಾನಂದ ಘೂಳೆ, ಕೇರಬಾ ಪವಾರ, ಸಂತೋಷ ಪೊ?ಕಲವಾರ, ಗುಂಡಪ್ಪ ಮುಧಾಳೆ, ರಾಮ ನರೋಟೆ, ವೀರಶೆಟ್ಟಿ ಅಲ್ಮಾಜೆ, ಸಂದೀಪ ಪಾಟೀಲ, ಅಶೋಕ ಶಂಬೆಳ್ಳಿ, ರಮೇಶ ಗೌಡಾ, ಆನಂದ ದ್ಯಾಡೆ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಅಗ್ನಿಶಾಮಕ ಅಧಿಕಾರಿಗೆ ತರಾಟೆಗೆ–ಅಗ್ನಿಶಾಮಕ ದಳದ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಸ್ಪಂದಿಸಿದ್ದರೆ ಅನಾಹುತ ಪ್ರಮಾಣವನ್ನು ತಗ್ಗಿಸಬಹುದಾಗಿತ್ತು. ಆದರೆ ಔರಾದ ಅಗ್ನಿಶಾಮಕ ಠಾಣೆಯ ಅಧಿಕಾರಿಗಳು ನಿಷ್ಕಾಳಜಿ ವಹಿಸಿದ್ದಾರೆ. ಇದು ತುರ್ತು ಇಲಾಖೆಯಾಗಿರುವುದರಿಂದ ದಿನದ 24 ಗಂಟೆಯೂ ಸಜ್ಜಾಗಿರಬೇಕು. ಆದರೆ ಬೆಂಕಿ ನಂದಿಸಲು ಬಂದ ವಾಹನದಲ್ಲಿ ನೀರು ಕಡಿಮೆಯಿರಲು ಕಾರಣವೇನು ? ಅಂಗಡಿಗಳು ಸತತ ಮೂರು ಗಂಟೆ ಉರಿದಿವೆ ಎನ್ನಲಾಗುತ್ತಿದೆ. ಅಷ್ಟು ಸಮಯದ ವರೆಗೆ ಏನು ಮಾಡಿದ್ದೀರಿ ? ಇಲ್ಲಿನ ಅಧಿಕಾರಿಗಳು ಕೆಲಸದ ಬದಲಿಗೆ ದಿನಗಳೆಯಲು ಹೆಚ್ಚಿನ ಆದ್ಯತೆ ನೀಡುತ್ತಿರುವಂತೆ ಕಾಣಿಸುತ್ತಿದೆ ಎಂದು ತೀವ್ರ ತರಾಟೆಗೆ ತೆಗೆದುಕೊಂಡರು. ಜಿಲ್ಲಾ ಅಗ್ನಿಶಾಮಕ ಅಧಿಕಾರಿಯನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ, ತಮ್ಮ ಇಲಾಖೆಯ ನಿಷ್ಕಾಳಜಿಯಿಂದಾಗಿ ಹಾನಿ ಪ್ರಮಾಣ ಹೆಚ್ಚಾಗಿದೆ. 11 ಜನ ಅಂಗಡಿಗಳು ಸುಟ್ಟುಹೋಗಿವೆ. ಬಹಳಷ್ಟು ನಷ್ಟವಾಗಿದೆ ಎಂದು ಹೇಳಿದರು.

ಸರ್ಕಾರದಿಂದ ಅಗತ್ಯ ನೆರವು ಕಲ್ಪಿಸುವೆ : ಚವ್ಹಾಣ

ಅಗ್ನಿ ಅವಘಡ ನಡೆದಿರುವುದು ತೀವ್ರ ಆಘಾತ ಉಂಟು ಮಾಡಿದೆ. ನನ್ನಿಂದ ಸಾಧ್ಯವಿರುವ ಎಲ್ಲ ರೀತಿಯ ಸಹಕಾರ ನೀಡುತ್ತೇನೆ. ತುರ್ತಾಗಿ ಪತ್ರ ಬರೆದು ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಆರ್ಥಿಕ ನೆರವು ಕಲ್ಪಿಸಲು ಪ್ರಯತ್ನಿಸುತ್ತೇನೆ. ನಾನು ನಿಮ್ಮ ಜೊತೆಗೆ ಇದ್ದೇನೆ. ವೈಯಕ್ತಿಕವಾಗಿ ಮತ್ತು ಸರ್ಕಾರದಿಂದ ಅಗತ್ಯ ನೆರವು ಕಲ್ಪಿಸಲು ಪ್ರಯತ್ನಿಸುತ್ತೇನೆ. ತಾವು ಯಾವುದೇ ಕಾರಣಕ್ಕೂ ಧೈರ್ಯ ಕಳೆದುಕೊಳ್ಳದಿರಿ ಎಂದು ಅಂಗಡಿ ಮಾಲೀಕರು ಮತ್ತವರ ಕುಟುಂಬಸ್ಥರಿಗೆ ಧೈರ್ಯ ತುಂಬಿ ವಯಕ್ತಿಕ ಧನ ಸಹಾಯ ಮಾಡಿದರು.

# ರಾಯಚೂರು ಉತ್ಸವ: ಜನವರಿ 25ರಂದು ಸೈಕ್ಲಿಂಗ್ ಮ್ಯಾರಥಾನ್

**ರಾಯಚೂರು,ಜ.12–** ರಾಯಚೂರು ಜಿಲ್ಲೆಯಲ್ಲಿ ಜನವರಿ-2026ರ ಮಾಹೆಯಲ್ಲಿ ಜರುಗುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಕಾರ್ಯಕ್ರಮದಲ್ಲಿ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದೆ.

ಜನವರಿ 25ರ ಬೆಳಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೈಕ್ಲಿಂಗ್ ಮ್ಯಾರಥಾನ್ ಸ್ಪರ್ಧೆ ಆಯೋಜನೆ ಮಾಡಲಾಗಿದೆ. ಆಸಕ್ತರು ಈ ಸ್ಪರ್ಧೆಯ ನೋಡಲ್ ಅಧಿಕಾರಿಗಳಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರ ಮೊಬೈಲ್ ಸಂಖ್ಯೆ: 9972316898 ಅಥವಾ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್ ಮೊಬೈಲ್ ಸಂಖ್ಯೆ: 9448427601ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದಾಗಿದೆ.

ಈ ಕ್ರೀಡೆಗಳಲ್ಲಿ ಆಸಕ್ತರು ಭಾಗವಹಿಸಿ ರಾಯಚೂರು ಜಿಲ್ಲೆ ಹೆಮ್ಮೆಪಡುವಂತಹ ಕ್ರೀಡೋತ್ಸವ ಮೂಡಿಬರಲು ಸಹಕರಿಸಿ ರಾಯಚೂರು ಉತ್ಸವವನ್ನು ಯಶಸ್ವಿಗೊಳಿಸಲು ಎಲ್ಲಾ ಕ್ರೀಡಾಪಟುಗಳು ಮತ್ತು ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆಯಿಂದ

# ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಅರ್ಜಿ ಆಹ್ವಾನ

**ರಾಯಚೂರು,ಜ.12–** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019-20 ಹಾಗೂ 2024-25ನೇ ಸಾಲಿನ ಎಸ್.ಎಫ್.ಸಿ ನಿಧಿಯ ಶೇ.5ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಡಿ ಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ ಬರುವ ಅರ್ಹ ಫಲಾನುಭವಿಗಳಿಗೆ ವಿವಿಧ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.

2019-20 ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ಥಿಗಾಗಿ 2ಲಕ್ಷ ರೂ.ಗಳು ಹಾಗೂ 2024-25ನೇ ಸಾಲಿನ ಶೇ.5ರಡಿ ಪರಿಶಿಷ್ಟ ಜಾತಿಯ ವಿಕಲಚೇತನರ ಮನೆಯ ಮೇಲ್ಛಾವಣೆ ದುರಸ್ಥಿಗಾಗಿ 1.15ಲಕ್ಷ ರೂ.ಗಳನ್ನು ಕಾಯ್ದಿಸಲಾಗಿದೆ.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಅದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಫೋಟೋ ಅಳತೆಯ 2 ಭಾವ ಚಿತ್ರ, ಬ್ಯಾಂಕ್ ಪಾಸ್ ಪುಸ್ತಕ್ ಹಾಗೂ ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ/ಯು.ಡಿ.ಎ. ಕಾರ್ಡ್, ವಿಕಲಚೇತನರ 1 ಭಾವಚಿತ್ರ, ಮನೆಯ ದುರಸ್ಥಿ ಮೇಲ್ಛಾವಣೆ ಛಾಯಾಚಿತ್ರ ಹಾಗೂ ಮೊಬೈಲ್ ನಂಬರ್‌ನೊಂದಿಗೆ ಜನವರಿ 17ರೊಳಗಾಗಿ ಸಲ್ಲಿಸಬಹುದಾಗಿದೆ. ಅವದಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿವಿಧ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜ.12–** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ ಡಾ॥ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಸೇವಾಸಿಂಧು ಮೂಲಕ ಆನ್ ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು (ಬೋಳಮಾನದೊಡ್ಡಿ ರಸ್ತೆ), ಗಿಲ್ಲೇಸೂಗೂರು (ಚಂದ್ರಬಂಡಾ ರಸ್ತೆ), ಯರಮರಸ್ ಕ್ಯಾಂಪ್, ಗಿಲ್ಲೆಸುಗೂರು ಕ್ಯಾಂಪ್, ಮಾನವಿ, ಸಿಂಧನೂರು, ಚನ್ನಹಳ್ಳಿ, ಮಸ್ಕಿ, ಲಿಂಗಸೂಗೂರು, ಸಿರವಾರ, ದೇವದುರ್ಗ ಮತ್ತು ಡಾ॥ಎ.ಪಿ.ಜೆ, ಅಬ್ದುಲ್ ಕಲಾಂ ವಸತಿ ಶಾಲೆ, ಯರಮರಸ್ ಕ್ಯಾಂಪ್ ರಾಯಚೂರಿನಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು ಮತ್ತು ಶೇ.25 ರಷ್ಟು ಸ್ಥಾನಗಳನ್ನು ಇತರೆ ವರ್ಗದವರಿಗೆ ಮೀಸಲಿರಿಸಲಾಗಿದೆ.


ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ 1,00,000 ರೂ.ಕ್ಕೆ ಮೀತಿಯಲ್ಲಿರಬೇಕು. ಹಾಗೂ ಹಿಂದುಳಿದ ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯವು 2,50,000 ರೂ.ಮಿತಿಯೊಳಗಿರತಕ್ಕದ್ದು, ಪ್ರಸ್ತುತ ಕರ್ನಾಟಕದ ಸರ್ಕಾರದ/ಅಂಗೀಕೃತ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್ ಮತ್ತು ಪಾರ್ಸಿ ಅರ್ಹ ವಿದ್ಯಾರ್ಥಿಗಳು ಮತ್ತು ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ ಸೇವಾಸಿಂಧು ವೆಬ್‌ಸೈಟ್ ವಿಳಾಸ: Website:https://sevasindhuservices.karnataka.gov.in ನಲ್ಲಿ ಫೆಬ್ರವರಿ 10ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ: 8277799990, 08022535902, ರಾಯಚೂರು ಮೊಬೈಲ್ ನಂಬರ್: 8496098631, 9731028420, 9731341815, 9686853719, 6361866571, 9108175899, 9902906266 ಮಾನವಿ, ಸಿರವಾರ: 7411771075, 886733478, ದೇವದುರ್ಗ 9731794252, 9148233616, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು: 8217621732, 9740871306, 8660879712ಗೆ ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ ನಗರ-2: ಇಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜ.12–**: ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ವ್ಯಾಪ್ತಿಯ 110ಕೆವಿ 110/11ಏಗಿ, ಎಂಯುಎಸ್‌ಎಸ್, ಎಪಿಎಂಸಿ ಯಾರ್ಡ್ ಡ್ರಾಗ್‌ಹೌಸ್ ಲಿಂಕ್ ಲೈನ್ ವಿಭಜನೆ ಕಾಮಗಾರಿಯನ್ನು ಕೈಗೊಂಡ ಪ್ರಯುಕ್ತ ಜನವರಿ 13ರ ಬೆಳಿಗ್ಗೆ 10ರಿಂದ ಸಂಜೆ 5ಗಂಟೆಯ ಅಲ್ಲಮಪ್ರಭು ಕಾಲೋನಿ, ಪೋತಗಲ್ ರೋಡ, ಎಲ್.ಬಿ.ಎಸ್. ನಗರ, ಅಲಿ ಕಾಲೋನಿ, ಚಂದ್ರಬಂಡ ರಸ್ತೆ, ಆಶ್ರಯ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ 24*7ಗ್ರಾಹಕರ ನಿರಂತರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಶ್ಚಿಮ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವ್ಯಕ್ತಿ ಕಾಣೆ: ಪತ್ತೆಗೆ ಮನವಿ



**ರಾಯಚೂರು,ಜ.12–**ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆ ವ್ಯಾಪ್ತಿಯ ಅಸ್ಕಿಹಾಳ ನಿವಾಸಿ ಆಂಜನೇಯ (62) ಅವರು ಸೆಪ್ಟೆಂಬರ್ 14ರ ಮಧ್ಯಾಹ್ನ 12.30ಕ್ಕೆ ಮನೆಯಲ್ಲಿ ಊಟ ಮಾಡಿ ಹೊರಗೆ ಹೋದವನ್ನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಠಾಣಾ ಅಪರಾಧ ಸಂಖ್ಯೆ: 128/2025 ಕಲಂ ಮನುಷ್ಯ ಕಾಣೆ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ತಮ್ಮ ತಂದೆಯು ಮೊಬೈಲ್ ಸಂಖ್ಯೆ: 9008104144ಗೆ ಅಂದು ಸಂಜೆ ಕರೆ ಮಾಡಿ ವಿಚಾರಿಸಿದಾಗ ಅವರು ಬರುತ್ತೇನೆ ಬಿಡು ಎಂದು ಸಿಟ್ಟು ಮಾಡಿದರು. ನಂತರ ಸಂಜೆ 4 ಗಂಟೆಗೆ ಕರೆ ಮಾಡಿದಾಗ ಅವರ ಮೊಬೈಲ್ ಸ್ವಿಚ್ಡ್ ಆಫ್ ಬಂದಿದೆ. ಕಾಣೆಯಾದ ತಮ್ಮ ತಂದೆಯ ಬಗ್ಗೆ ಸಂಬಂಧಿಕರ ಮನೆಯಲ್ಲಿ ಹುಡುಕಾಡಿದಾಗ ಪತ್ತೆಯಾಗಿರುವುದಿಲ್ಲ ಎಂದು ಕಾಣೆಯಾದ ಆಂಜನೇಯ ಅವರ ಪುತ್ರ, ನಾಗರಕಟ್ಟೆಯ ಕೃಷ್ಣಮೆಡೌಸ್‌ನಲ್ಲಿ ವಾಚಮನ್ ಆಗಿ ಕೆಲಸ ಮಾಡುವ ರಮೇಶ ಅವರು ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ: ಕಾಣೆಯಾದ ಆಂಜನೇಯ ಅವರು 5.6 ಎತ್ತರ, ತೆಳ್ಳನೆಯ ಮೈಕಟ್ಟು, ಗೋಧಿ ಮೈಬಣ್ಣ, ಉದ್ದನೆಯ ಮುಖ, ತಲೆಯಲ್ಲಿ ಕಪ್ಪು ಕೂದಲು ಹೊಂದಿದ್ದು, ಬಿಳಿ ಪಂಚೆ, ಬಿಳಿ ಜುಬ್ಬ ಹಾಗೂ ಹಸಿರು ಟಾವೆಲ್ ಬಟ್ಟೆಗಳನ್ನು ಧರಿಸಿರುತ್ತಾರೆ. ಕನ್ನಡ, ತೆಲುಗು, ಇಂಗ್ಲೀಷ್ ಹಾಗೂ ಹಿಂದಿ ಭಾಷೆ ಮಾತನಾಡುತ್ತಾರೆ.

ಈ ವ್ಯಕ್ತಿಯ ಬಗ್ಗೆ ಸುಳಿವು ಕಂಡುಬಂದಲ್ಲಿ ಪಶ್ಚಿಮ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532-232570, ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803847, ಪಶ್ಚಿಮ ವೃತ್ತ ಸಿ.ಪಿ.ಐ ಮೊಬೈಲ್ ಸಂಖ್ಯೆ: 9480803831, ಜಿಲ್ಲಾ ನಿಸ್ತಂತು ಘಟಕ ರಾಯಚೂರು ದೂರವಾಣಿ ಸಂಖ್ಯೆ: 08532-235635, 9480803800ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಶ್ಚಿಮ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರವಾರ, ಮಾನವಿ: ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪುನಃ ಅರ್ಜಿ ಸಲ್ಲಿಸಲು ಜ.15ರವರೆಗೆ ಕಾಲಾವಕಾಶ

**ರಾಯಚೂರು,ಜ.12–** ಜಿಲ್ಲೆಯ ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶದನ್ವಯ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 4 ವಿವಿಧ ಹಂತಗಳಿದ್ದು, ಅರ್ಜಿ ಸಲ್ಲಿಸುವ 4 ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2026ರ ಜನವರಿ 15ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ನೀಡಿಲಾಗಿದೆ.

ಒಂದನೇ ಹಂತ: ಆನ್‌ಲೈನ್ ತಂತ್ರಾಂಶದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು, ಎರಡನೇ ಹಂತ: ತಮ್ಮ ಭಾವಚಿತ್ರ ಸಹಿಯನ್ನು ಅಪ್‌ಲೋಡ್ ಮಾಡುವುದು, ಮೂರನೇ ಹಂತ: ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು, ನಾಲ್ಕನೇ ಹಂತ: ತಮ್ಮ ಆಧಾರ್ ಸಂಖ್ಯೆ ನಮೂದಿಸಿ, ಇ-ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಜನವರಿ 15 ರೊಳಗಾಗಿ ವೆಬ್‌ಸೈಟ್ ವಿಳಾಸ: https://karnemakaone.kar.nic.in/abcd/ ನಲ್ಲಿ ಪೂರ್ಣಗೊಳಿಸಬೇಕು. ಆನ್‌ಲೈನ್‌ನಲ್ಲಿ ಅಪೂರ್ಣ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಸಿರವಾರ, ಮಾನವಿ ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆಂದು ಸಿರವಾರ, ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಣಿ ಪ್ರಕ್ರಿಯೆ ಆರಂಭ

**ರಾಯಚೂರು,ಜ.12–**ಇಲ್ಲಿನ ಸಹಕಾರ ಸಂಘಗಳ ಉಪ ನಿಬಂಧಕರವರ ಕಾರ್ಯಾಲಯದಿಂದ 2025-26ನೇ ಸಾಲಿನ ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸುವ ಪ್ರಕ್ರಿಯೆ ಆರಂಭವಾಗಿದೆ.

ಯಶಸ್ವಿನಿ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಾಗಿದ್ದು, ಈ ಯೋಜನೆಯಡಿ ನೋಂದಾಯಿಸಲು ಸರ್ಕಾರವು ಆದೇಶ ಹೊರಡಿಸಿದ್ದು, ಅದರನ್ವಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ, ಪಿಕಾರ್ಡ್ ಬ್ಯಾಂಕಗಳ, ಹಾಲು ಉತ್ಪಾದಕರ ಸಹಕಾರ ಸಂಘಗಳ, ಟಿ.ಎ.ಪಿ.ಸಿ.ಎಮ್.ಎಸ್‌ಗಳ ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿ ಅಥವಾ ಕರ್ನಾಟಕ ಸೌಹಾರ್ದ ಸಹಕಾರಿಗಳ ಕಾಯ್ದೆ 1997ರಡಿ ಅಥವಾ ಬಹು ರಾಜ್ಯ ಸಹಕಾರಿ ಸಂಘಗಳ ಕಾಯ್ದೆ 2002ರಡಿ ನೋಂದಾಯಿಸಿ, ಕಾರ್ಯನಿರ್ವಹಿಸುತ್ತಿರುವ ಯಾವುದೇ ಸಹಕಾರ ಸಂಘಗಳ ಸದಸ್ಯರು ಮತ್ತು ಗ್ರಾಮೀಣ ಸಹಕಾರ ಸಂಘಗಳ/ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಮತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಸಂಘಟಿಸಲ್ಪಟ್ಟಿರುವ ಸ್ವಸಹಾಯ ಗುಂಪುಗಳ ಸದಸ್ಯರುಗಳು ಗರಿಷ್ಟ ನಾಲ್ಕು ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ 500ರೂ.ಗಳು ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಹೆಚ್ಚುವರಿ ಸದಸ್ಯರಿಗೆ 100ರೂ.ಗಳನ್ನು ಪಾವತಿಸಿ ನೋಂದಾಯಿಸಬಹುದು ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ.

ಅದೇ ರೀತಿ ನಗರ ಸಹಕಾರಿಗಳ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸಲು ಈ ಯೋಜನೆಯಡಿ ಗರಿಷ್ಟ ನಾಲ್ಕು ಸದಸ್ಯರ ಕುಟುಂಬಕ್ಕೆ ವಾರ್ಷಿಕ ವಂತಿಗೆ ರೂ.1000/- ರಂತೆ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಹೆಚ್ಚುವರಿ ಸದಸ್ಯರಿಗೆ ರೂ.200/-ಗಳನ್ನು ಪಾವತಿಸಿ ನೋಂದಾಯಿಸಬಹುದು.

ನವಜಾತ ಶಿಶು ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡ್ನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಸೌಲಭ್ಯವನ್ನು ಮುಂದಿನ ವರ್ಷ ನೋಂದಾಣಿಯಾಗುವವರೆವಿಗೆ ಪಡೆಯಬಹುದು. ನಂತರದಲ್ಲಿ ಮಗುವಿನ ಹೆಸರನ್ನು ನೋಂದಾಯಿಸಿಕೊಂಡು ಯೋಜನೆಯ ಸೌಲಭ್ಯ ಪಡೆಯಬಹುದು.

ಯಶಸ್ವಿನಿ ಯೋಜನೆಯಡಿ ಸದಸ್ಯರಾಗಲು ಸಹಕಾರ ಸಂಘಗಳಲ್ಲಿ ಸದಸ್ಯರಾಗಿ ಯಶಸ್ವಿನಿ ಯೋಜನೆಯಡಿ ನೋಂದಾಯಿಸುವ ದಿನಾಂಕಕ್ಕೆ ಕನಿಷ್ಠ 3 ತಿಂಗಳು ಕಳೆದಿರಬೇಕು. ಹಾಗೂ ವಯೋಮಿತಿಯ ನಿರ್ಬಂಧವಿರುವುದಿಲ್ಲ.

ಈ ಯೋಜನೆಯಡಿ ಯಶಸ್ವಿನಿ ಸದಸ್ಯರುಗಳನ್ನು ನೋಂದಾಯಿಸುವ/ನೋಂದಣಿ ಪ್ರಕ್ರಿಯೆಯನ್ನು ದಿನಾಂಕ:03-01-2026 ರಿಂದ ಪ್ರಾರಂಭವಾಗಿರುವುದರಿಂದ ಸದರಿ ಯೋಜನೆಯಡಿ ಸರಿ ಸುಮಾರು 1650 ಖಾಯಿಲೆಗಳಿಗೆ ಚಿಕಿತ್ಸೆಗಳು ಮತ್ತು 478 ಐ.ಸಿ.ಯು ಚಿಕಿತ್ಸೆಗಳು ಒಟ್ಟು 2128 ಚಿಕಿತ್ಸೆಗಳನ್ನು ಯಶಸ್ವಿನಿ ಯೋಜನೆಯಡಿ ಅಳವಡಿಸಿಕೊಂಡಿರುವುದರಿಂದ ಸದರಿ ಯೋಜನೆಯ ಫಲಾನುಭವಿಗಳ ಕುಟುಂಬಕ್ಕೆ ವಾರ್ಷಿಕ ವೈದ್ಯಕೀಯ ಚಿಕಿತ್ಸಾ ವೆಚ್ಚದ ಗರಿಷ್ಠ ಮಿತಿ 5.00 ಲಕ್ಷ ರೂ.ಗಳಿಗೆ ನಿಗಧಿಪಡಿಸಿದೆ. ರಾಜ್ಯದ ಯಾವುದೇ ಯಶಸ್ವಿನಿ ನೆಟ್‌ವರ್ಕ ಅಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸೆ ಪಡೆಯಲು ಅವಕಾಶವಿರುತ್ತದೆ. ಸದರಿ ಯೋಜನೆಯಡಿಯಲ್ಲಿ ನೋಂದಾಯಿಸಿ ಪ್ರಯೋಜನೆ ಪಡೆದುಕೊಳ್ಳಲು ಕೋರಲಾಗಿದೆ. 2025-26ನೇ ಯಶಸ್ವಿನಿ ಯೋಜನೆಯ ಅವಧಿ ದಿನಾಂಕ:03-01-2026 ರಿಂದ 31-03-2026ರವರೆಗೆ ಜಾರಿಯಲ್ಲಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಸಹಕಾರ ಸಂಘಗಳು ಹಾಗೂ ಸಹಕಾರ ಇಲಾಖಾ ಕಚೇರಿಗಳನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: ರಾಯಚೂರು 988730795, 7996998253, 08532-226268/9902165419, ಸಿಂಧನೂರು-08535-230550/9844669557, ಮಾನವಿ 9164034407, ಲಿಂಗಸೂಗೂರು 9972551962, ಸಹಕಾರ ವಿಸ್ತೀರ್ಣಾಧಿಕಾರಿ ರಾಯಚೂರು 8904641721, ದೇವದುರ್ಗ 9686647802, ಸಿಂಧನೂರು 9880744147, ಮಸ್ಕಿ 9901103053, ಸಿರವಾರ 9900612229ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನವರಿ 14ರಂದು ಜಿಲ್ಲಾಡಳಿತದಿಂದ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ

**ರಾಯಚೂರು,ಜ.12–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 14ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.


ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ಮಾನ್ವಿ ಬಾಷಿಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಅಧ್ಯಾಪಾಕರಾದ ಡಾ.ಬಸವರಾಜ ಸುಂಕೇಶ್ವರ ಅವರು ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿವಮೂರ್ತಿ ಎಂಬ ಯುವಕ ಕಾಣೆ: ಪತ್ತೆಗೆ ಗ್ರಾಮೀಣ ಪೊಲೀಸರ ಮನವಿ



**ರಾಯಚೂರು,ಜ.12–**: ಜಿಲ್ಲೆಯ ದೇವದುರ್ಗ ತಾಲೂಕಿನ ಪಲಕನಮರಡಿ ಗ್ರಾಮದ ಶಿವಮೂರ್ತಿ ತಂದೆ ನಿಂಗಣ್ಣ (20) ಎಂಬ ಯುವಕ ರಾಯಚೂರಿನ ಯರಮರಸ್ ಕ್ಯಾಂಪನ ಬಿಸಿಎಮ್ ಇಲಾಖೆಯ ಡಿ.ದೇವರಾಜ ಅರಸು ಮೆಟ್ರಿಕ್ ನಂತರ ಬಾಲಕರ ವಸತಿದಲ್ಲಿದ್ದು, 2025ರ ಏಪ್ರೀಲ್ 13ರ ಬೆಳಿಗ್ಗೆ 09:30 ಗಂಟೆಯಿಂದ ಹಾಸ್ಟೇಲ್ ನಿಂದ ಹೊರಗಡೆ ತನ್ನ ಸ್ನೇಹಿತರ ಸಂಗಡ ಯರಮರಸ್ ಕ್ಯಾಂಪ ವರೆಗೆ ಹೋಗಿದ್ದು, ತಾನು ರಾಯಚೂರುಗೆ ಹೋಗಿ ಬರುತ್ತೇನೆ ಅಂತಹ ತನ್ನ ಸ್ನೇಹಿತರಿಗೆ ಹೇಳಿ ಹೋದವನು ಇಲ್ಲಿಯವರೆಗೆ ಹಾಸ್ಟೇಲ್‌ಗೆ ಬರದೇ ಕಾಣೆಯಾಗಿದ್ದು, ಈ ಕುರಿತು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:57/2025ರಡಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಯುವಕನ ಚಹರೆ: ವಯಸ್ಸು 20, ಜಾತಿ ಕುರುಬರು, ಉದ್ಯೋಗ ವಿದ್ಯಾರ್ಥಿ, ಗೋಧಿ ಬಣ್ಣ ಮೈ ಬಣ್ಣ, ದುಂಡನೇಯ ಮುಖ, ತಲೆಯಲ್ಲಿ ಕಪ್ಪು ಕೂದಲು, ಬಿಳಿ ಬಣ್ಣದ ಲೈನ್ ಫುಲ್ ಶರ್ಟ್, ಕಪ್ಪು ಬಣ್ಣದ ಫ್ಯಾಂಟ್, ಗುಲಾಬಿ ಬಣ್ಣದ ಟವೆಲ್ ಕೊರಳಲ್ಲಿ ಧರಿಸಿದ್ದು, ಕನ್ನಡ, ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ. ಈ ಯುವಕನ ಬಗ್ಗೆ ಸುಳಿವು ಕಂಡುಬಂದಲ್ಲಿ ಪಿ.ಎಸ್.ಐ. ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803850, ಹಾಗೂ ಸಿ.ಪಿ.ಐ. ಗ್ರಾಮೀಣ ವೃತ್ತ ರಾಯಚೂರು ಮೊಬೈಲ್: 9480803832ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ವೃತ್ತ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂಲಭೂತ ಸೌಕರ್ಯಕ್ಕೆ ಕನ್ನಡ ಸೇನೆ ಒತ್ತಾಯ



ಧೈರ್ಯದ ದಾರಿ

ಕನ್ನಡ ಸೇನೆಯ ಮುಖಂಡರನ್ನು ವಾರ್ಡ್ -2ರ ಜನರು ತಮ್ಮ ಸಮಸ್ಯೆಗಳನ್ನು ವೀಕ್ಷಿಸಲು ಹೇಳಿದಾಗ ನೇತಾಜಿ ಶಾಲೆಯ ಹಿಂದೆ ಇರುವ ಲೇಔಟ್ ಗಳಿಗೆ ಒಂದಕ್ಕೊಂದು ಲಿಂಕ್ ರಸ್ತೆಗಳು ಇಲ್ಲಾ, ಇಲ್ಲಿ ಗಾರ್ಡನ್ ನಿರ್ಮಾಣ ಮಾಡ್ತಾಯಿದ್ದಾರೆ ಸಂತೋಷದ ವಿಷಯ ಆದ್ರೆ ಜನರಿಗೆ ಓಡಾಡಲು ದಾರಿಯೇ ಇಲ್ಲದಮೇಲೆ ಗಾರ್ಡನ್ ಏನ್ಮಾಡ್ಬೇಕು ಈ ಏರಿಯಾದ ಜನರು ನೇತಾಜಿ ಶಾಲೆಯ ಕಾರ್ಯಕ್ರಮಕ್ಕೆ ಸಚಿವರಾದ ಶ್ರೀ ಎನ್ ಎಸ್ ಬೋಸರಾಜು ಇವರ ಗಮನಕ್ಕೆ ತಂದಾಗ ಸ್ಪಂದಿಸಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಹೇಳುತ್ತೇನೆ ಎಂದು ಆಶ್ವಾಸನೆ ಕೊಟ್ಟಿದ್ದಾರೆ ಎಂದು ಅಲ್ಲಿಯ ನಿವಾಸಿಗಳ ಹೇಳಿದ್ದು ನಮ್ಮ ಮುಂದೆ ಹೇಳಿದ್ದಾರೆ ಸಚಿವರು ಹೇಳಿದಮೇಲೆ ಖಂಡಿತ ಈ ಜನರ ಸಮಸ್ಯೆಗೆ ಪರಿಹಾರ ಸಿಗಬಹುದು ಆದರೂ ಕನ್ನಡ ಸೇನೆ ಕರ್ನಾಟಕ ಘಟಕ ಈ ಬದಲಾವಣೆಯ ಬೆಂಬಲ ನೀಡಿದ್ದು ಇಲ್ಲಿಯ ಶಾಲೆಗೆ ಹೋಗುವ ವಿದ್ಯಾರ್ಥಿಗಳಿಗೆ ತೊಂದ್ರೆ ಆಗದಂತೆ ಅಧಿಕಾರಿಗಳು ಈ ಬದಲಾವಣೆಯ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕನ್ನಡ ಸೇನೆ ಒತ್ತಾಯಿಸುತ್ತದೆ. ಈ ಸಂದರ್ಭದಲ್ಲಿ ಬದಲಾವಣೆಯ ಮುಖಂಡರುಗಳಾದ ಮೌಲಾನ ಶಂಶಿರ್ ಸಾಬ್, ಶಬ್ಬೀರ್ ಲೈಟಿಂಗ್, ಮೈನು ಮೇಸ್ತ್ರಿ, ರಶೀದ್, ಆಬಿದ್, ಸಲೀಮ್, ಕನ್ನಡ ಸೇನೆಯ ಗೌರವ ಸಲಹೆಗಾರರಾದ ಸಾಜಿದ್ ಖಾದ್ರಿ ತಾಲೂಕು ಅಧ್ಯಕ್ಷ ಬಸವ ಮೈಲಾರಿ, ಶರಣಬಸವ, ಶಿವಾನಂದ ನಾಯಕ, ಶೇಖ್ ಮುಸ್ತಫಾ, ನಜೀರ್ ಅಹ್ಮದ್ ಇನ್ನೂ ಅನೇಕ ಜನರು ಉಪಸ್ಥಿತರಿದ್ದರು.

# ಜಾನಪದದಿಂದ ಸಾಮಾಜಿಕ ಪರಿವರ್ತನೆ ಸಾಧ್ಯ



**ಕಲಬುರಗಿ:ಜ.12:**ನಮ್ಮತನ, ಹೃದಯ ಶ್ರೀಮಂತಿಕೆ, ಮಾನವೀಯ ಮೌಲ್ಯಗಳು, ಸಾಮಾಜಿಕ ಕಾಳಜಿ, ಕೌಟುಂಬಿಕ ಸಾಮರಸ್ಯ ಸೇರಿದಂತೆ ಬದುಕಿನ ಶ್ರೀಮಂತಿಕೆಯನ್ನು ಕಟ್ಟಿಕೊಡುವ, ನಮ್ಮದೇಶದ ಮೂಲ ಸಂಸ್ಕೃತಿ, ಪರಂಪರೆಯಾದಜಾನಪದ ಸಾಹಿತ್ಯದಿಂದ ಸಾವಾಜಿಕ ಪರಿವರ್ತನೆ ಸಾಧ್ಯವಿದೆ. ಜಾನಪದದಿಂದದೂರ ಸರಿದರೆ ಸವಾಜಕ್ಕೆಆಪತ್ತಿದೆ. ಸಂಗೀತದಿಂದ ಮಾನಸಿಕ ನೆಮ್ಮದಿ ಸಾಧ್ಯವಿದ್ದು, ಇದುಜಾತಿ, ಧರ್ಮ, ವರ್ಗ, ಪ್ರದೇಶರಹಿತವಾಗಿದೆಎಂದುಹಾಲಪ್ಪಯ್ಯ ವಿರಕ್ತ ಮಠದ ಪೂಜ್ಯ ಪಂಚಾಕ್ಷರಿ ಸ್ವಾಮೀಜಿಅಭಿಮತಪಟ್ಟರು.
ಸೇಡಂಪಟ್ಟಣದ ಮಾತೃಛಾಯಾ ಪದವಿ ಪೂರ್ವಕಾಲೇಜು ಎದುರುಗಡೆಯ ಭೋವಿ ಕಾಂಪೆನಲ್ಲಿ ಭಾನುವಾರ ಏರ್ಪಡಿಸಿದ್ದ 'ಸ್ಟಾರ್ ಮೆಲೋಡಿಸ್'ನ ಉದ್ಘಾಟನೆ ಮತ್ತುಕನ್ನಡಜಾನಪದ ಪರಿಷತ್ತಾಲೂಕಾ ಘಟಕದ ವತಿಯಿಂದಜರುಗಿದಜಾನ ಪದಗೀತ ಗಾಯನ ಮತ್ತುಕಲಾವಿದರಿಗೆಗೌರವ ಸತ್ಕಾರಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ಸಾಹಿತಿ ಶೋಭಾದೇವಿ ಚಕ್ಕಿ ಮಾತನಾಡಿ, ನಮ್ಮ ಭಾಗದಲ್ಲಿ ಪ್ರತಿಭೆಗಳಿಗೆ ಕೊರತೆಯಿಲ್ಲ. ಆದರೆಅವರನ್ನು ಗುರುತಿಸಿ, ಪ್ರೋತ್ಸಾಹಿಸುವ ಕಾರ್ಯವಾಗಬೇಕಾಗಿದೆ. ನಮ್ಮ ಪ್ರತಿಭೆಗಳು ರಾಜ್ಯ ಮಟ್ಟದಲ್ಲಿ ಸಾಧನೆ ಮಾಡಿಕೀರ್ತಿಯನ್ನುತರುವಂತಾಗಬೇಕು. ಜಾನಪದಕ್ಕೆ ವಯಸ್ಸಿನ ಮಿತಿಯಿಲ್ಲ. ಇಂತಹ ಕಾರ್ಯಕ್ರಮಗಳನ್ನು ಇನ್ನೂ ಹೆಚ್ಚಿನ ವುಟ್ಟದಲ್ಲಿಜರುಗಬೇಕು. ಇಂದಿನ ಯುವಜನತೆಗೆಜನಪದ ಸಾಹಿತ್ಯ, ಪರಂಪರೆಯನ್ನು ಮುಟ್ಟಿಸುವ ಕೆಲಸವಾಗಬೇಕು. ಜನಪದ ಉಳಿದರೆ ಮಾತ್ರದೇಶದ ಸಂಸ್ಕೃತಿ, ಪರಂಪರೆ ಉಳಿಯಲು ಸಾಧ್ಯವಿದೆಎಂಬುದನ್ನು ಮರೆಯುವಂತಿಲ್ಲಎಂದುಜಾನಪದ ಗೀತೆಗಳನ್ನು ಹಾಡುವ ಮೂಲಕ ತಿಳಿಸಿದರು.

ಕಜಾಪಜಿಲ್ಲಾಧ್ಯಕ್ಷ ಎಂ.ಬಿ.ನಿಂಗಪ್ಪ, ತಾಲೂಕಾಧ್ಯಕ್ಷ ಶಿವರಾವ ಭೋವಿ, ಸಂಗೀತ ಶಿಕ್ಷಕಿ ಸಾವಿತ್ರಿಬಾಯಿಕುಲಕರ್ಣಿ ಮಾತನಾಡಿದರು. ಕಜಾಪಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಬಿ.ಪಾಟೀಲ್, ಅವಿನಾಶ ಭೋವಿ, ಡಾ.ಎಂ.ಜಿ.ದೇಶಪಾಂಡೆ, ಗಂಗಾಧರಕುಲಕರ್ಣಿ, ವಲ್ಲಭ ಜೋಶಿ, ಡಾ.ಪ್ರತೀಕ್ಷಾಎಸ್.ಭೋವಿ, ಅಚಿಜನಾದೇವಿ, ಮಾರುತಿ ಹುಳಗೋಳಕರ್, ನಾಗರಾಜ ಮಾಲಿಪಾಟೀಲ್, ಭೀಮಾಶಂಕರ ವಿಶ್ವಕರ್ಮ, ಶಿವಶರಣಪ್ಪ ಜಮಾದಾರ, ಸಂತೋಷ ತೊಟ್ನಳ್ಳಿ, ಶಿವಯೋಗಿ ಸಕ್ಪಾಲ್, ಗೊಲ್ಲಪ್ಪ ಜೋಶಿ, ಗಂಗಾಧರಕುಲಕರ್ಣಿ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

# ಲೀಜಿಲ್ಲದ ಸುಂಕ್ಲಮ್ಮಗುಡಿ ಪ್ರದೇಶದಲ್ಲಿಓಎಂಸಿ ಗಣಿ ಲೂಟಿ: ಟಪಾಲ್

**ಬಳ್ಳಾರಿ, .ಜ.12:** ಆಂಧ್ರಪ್ರದೇಶದ ಓಬಳಾಪುರಂ ಬಳಿಯ ಬಳ್ಳಾರಿ ಸಂರಕ್ಷಿತ ಅರಣ್ಯ ಪ್ರದೇಶದಲ್ಲಿ ಸುಂಕ್ಲಮ್ಮ ದೇವಸ್ಥಾನ ಇದ್ದ 10 ಎಕರೆ (3.98)ಹೆಕ್ಟಾರ್ ಪ್ರದೇಶದಲ್ಲಿ ಮಾಜಿ ಸಚಿವ, ಗಂಗಾವತಿ ಶಾಸಕ ಜನಾರ್ಧನರೆಡ್ಡಿ ಅವರಿಗೆ ಸೇರಿದ ಓಎಂಸಿ ಕಂಪನಿ ಅಕ್ರಮವಾಗಿ ರಸ್ತೆ ನಿರ್ಮಿಸಿ ಗಣಿ ಲೂಟಿ ಮಾಡಿದೆ ಎಂಬುದನ್ನು ಇತ್ತೀಚೆಗೆ ನಡೆಸಿದ ಸರ್ವೆ ದಾಖಲೆಗಳಲ್ಲಿ ಬಹಿರಂಗವಾಗಿದೆ.
ಇತ್ತೀಚೆಗೆ ಸುಪ್ರೀಂ ಕೋರ್ಟ್ ನೇಮಿಸಿದ ನ್ಯಾಯಾಧೀಶ ಸುಧಾಂಸು ಧುಲಿಯಾ ನೇತೃತ್ವದಲ್ಲಿ ಸಿಇಸಿ, ಸರ್ವೆ, ಗಣಿ, ಅರಣ್ಯ, ಕಂದಾಯ ಇಲಾಖೆಗಳ ತಂಡ. 2025 ರ ಅಕ್ಟೋಬರ್ 31 ರಿಂದ ನವೆಂಬರ್ 12 ವರೆಗೆ ಸರ್ವೆ ಮಾಡಿದ್ದು. ಅದರಲ್ಲಿ ಈ ಅಂಶ ಪತ್ತೆ ಹಚ್ಚಿರುವ ಸಮಿತಿ ಈ ದಾಖಲೆಗಳನ್ನು ಸುಪ್ರೀಂ ಕೋರ್ಟಿಗೆ ಸಲ್ಲಿಸಲು ಮುಂದಾಗಿದೆ.
ಈ ದಾಖಲೆಗಳನ್ನು ಸಲ್ಲಿಸುವ ಮುನ್ನ ಗಣಿ ಕಂಪನಿಗಳಿಂದ ಆಕ್ಷೇಪ ಸಲ್ಲಿಕೆಗೆ ಕೋರಿದ್ದು. ಜ.5 ರಂದು ಸಮಿತಿ ಮುಂದೆ ಹಾಜರಾದ ಬಿಐಓಪಿ, ವೈಎಂಎಸ್ ಕಂಪನಿಗಳು ಸಮಿತಿಯ ದಾಖಲೆಗಳಿಗೆ ಆಕ್ಷೇಪ ಎತ್ತಿಲ್ಲ ಅಲ್ಲದೆ ಗಣಿ ಗಡಿ ಒತ್ತುವರಿ ಮಾಡಿ ಹಾಕಿರುವ ಡಂಪಿಂಗ್ ಗೆ ಸಂಬಂಧಿಸಿ ಈ ಮೊದಲು ದಂಡ ಪಾವತಿಸಿದ್ದು. ಈಗಲೂ ಪಾವತಿಸಲು ಸೂಚಿಸಿದರೆ ಅದಕ್ಕೂ ಸಮ್ಮತಿ ಇದೆಂದು ಹೇಳಿಧದಾರೆ ಎಂದು ತಿಳಿದು ಬಂದಿದೆ.
ಆದರೆ ಓಎಂಸಿ ಕಂಪನಿ ಈ ಸರ್ವೆ ದಾಖಲೆಗಳ ಬಗ್ಗೆ ಆಕ್ಷೇಪವೆತ್ತಿ. ತಮ್ಮ ಬಳಿ ಇರುವ ದಾಖಲೆಗಳಿಗೂ ಇವುಗಳಿಗೂ ಹೋಲಿಕೆ ಇಲ್ಲ. ಅದಕ್ಕಾಗಿ ದಾಖಲೆಗಳನ್ನು ಸಲ್ಲಿಸಲು ಸಮಯಾವಕಾಶ ನೀಡಲು ಕೋರಿದ್ದು. ಜ.20 ರ ವರೆಗೆ ಅವಕಾಶ ನೀಡಲಾಗಿದೆಯಂತೆ. ಅಷ್ಟರಲ್ಲಿ ಓಎಂಸಿ ಕಂಪನಿ ದಾಖಲೆಗಳನ್ನು ನೀಡಿದರೆ ಪರಿಶೀಲಿಸಿ ಅಂತಿಮವಾಗಿ ಸುಪ್ರೀಂ ಕೋರ್ಟಿಗೆ ಓಎಂಸಿ ಕಂಪನಿ ಮಾಡಿರುವ ಅಕ್ರಮದ ಬಗ್ಗೆ ವರದಿ ನೀಡಲಿದೆಯಂತೆ.
**ಅಕ್ರಮದ ವಿವರಗಳು:** ಓಎಂಸಿ ಮತ್ತು ಎಎಂಸಿ ಕಂಪನಿ ಅಕ್ರಮ ಗಣಿಗಾರಿಕೆ ನಡೆಸಲೆಂದು ಅರಣ್ಯ ಇಲಾಖೆಯ ಅನುಮತಿ ಪಡೆಯದೆ. 7.47 ಕಿಲೋ ಮೀಟರ್ ರಸ್ತೆಯನ್ನು ಅರಣ್ಯದಲ್ಲಿ ಮಾಡಿದೆ.
ಓಎಂಸಿಯ 25.98 ಹೆಕ್ಟಾರ್ ಪ್ರದೇಶದ ಲೀಜ್ ಅಲ್ಲದೆ 1.75 ಹೆಕ್ಟಾರ್ ಪ್ರದೇಶ ಒತ್ತುವರಿ ಮಾಡಿದೆ. ಅದೇ ರೀತಿ 68.5 ಹೆಕ್ಟರ್ ಲೀಜ್ ಪ್ರದೇಶದ ಪಕ್ಷದಲ್ಲಿ 0.49 ಹೆಕ್ಟಾರ್ ಒತ್ತುವರಿ ಮಾಡಿ ಡಂಪಿಂಗ್ ಮಾಡಿದೆಯಂತೆ.
ಇನ್ನು ವೈ.ಮಹಾಬಲೇಶ್ವರಪ್ಪ ಅಂಡ್ ಸನ್ಸ್ ಕಂಪನಿ 20.24 ಹೆಕ್ಟಾರ್ ಲೀಜ್ ಪ್ರದೇಶದ ಪಕ್ಕದಲ್ಲಿ 1.56 ಹೆಕ್ಟಾರ್ ಮತ್ತು ಎಸ್.ಕೆ.ಮೋದಿ ಮಾಲೀಕತ್ವದ ಬಿಐಓಪಿ ಕಂಪನಿ ತನ್ನ 1.76 ಹೆಕ್ಟಾರ್ ಪ್ರದೇಶವನ್ನು ಒತ್ತುವರಿ ಮಾಡಿ ಡಂಪಿಂಗ್ ಮಾಡಿದೆ ಎಂದು ಸರ್ವೆ ವರದಿಯಲ್ಲಿ ಬಹಿರಂಗವಾಗಿದೆಯಂತೆ.

**ಗಮನ ಬೇರೆಡೆ ಸೆಳೆಯಲು ಯತ್ನ:** ಸುಂಕ್ಲಮ್ಮ ಗುಡಿ ಸುತ್ತಮುತ್ತಲ 10 ಎಕರೆ ಪ್ರದೇಶಗಣಿಗಾರಿಕೆ ನಿಷೇಧವಾಗಿತ್ತು. ಅಲ್ಲಿ ಗಣಿಗಾರಿಕೆಗೆ ಅನುಮತಿ ಇಲ್ಲದಿದ್ದರೂ, ಗುಡಿಯನ್ನೇ ಧ್ವಂಸವಾಡಿ ಜನಾರ್ಧನರೆಡ್ಡಿ ಅಕ್ರಮ ಗಣಿಗಾರಿಕೆ ನಡೆಸಿ ಕೊಳ್ಳೆ ಹೊಡೆದಿರುವುದು ಈಗ ಸರ್ವೆ ಮೂಲಕ ಬಹಿರಂಗ ಆಗಿದೆ. ಈ ವಿಷಯ ಮಾಧ್ಯಮಗಳಲ್ಲಿ ಹೆಚ್ಚು ಪ್ರಚಾರ ಪಡೆಯದಂತೆ ಮಾಡಲು ರೆಡ್ಡಿ ಬಳ್ಳಾರಿಯಲ್ಲಿ ಬ್ಯಾನರ್ ಗಲಾಟೆ ಸೃಷ್ಟಿ ಮಾಡಿದ್ದಾನೆ.
ಟಪಾಲ್ ಗಣೇಶ್, ಗಣಿ ಉದ್ಯಮಿ.

# ಜಟಾಯು ಕಣ್ಣು ಕನ್ನಡ ದಿನಪತ್ರಿಕೆಯ ಲೋಕಾರ್ಪಣೆ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ,ಜ.12**-ಪಟ್ಟಣದ ಪತ್ರಿಕಾ ಭವನದಲ್ಲಿ ಮಾಜಿ ಸಚಿವರಾದ ಕೆ.ಶಿವನಗೌಡ ನಾಯಕ್ ಜಟಾಯು ಕಣ್ಣು ಕನ್ನಡ ದಿನಪತ್ರಿಕೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿ ಸ್ವತಂತ್ರ ಸಮಯದಲ್ಲಿ ಪತ್ರಿಕೆಗಳು ಮಹಾತ್ಮ ಗಾಂಧಿಯವರ ಜೋತೆಯಾಗಿ ನಿಂತು ಅವರ ಸಂದೇಶಗಳನ್ನು ಜನರಲ್ಲಿ ತಿಳಿಸುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದುದನ್ನು ಕಾಣಬಹುದಾಗಿದೆ, ಅಭಿವೃದ್ದಿಗೆ ಪೂರಕವಾಗಿ , ದೃಷ್ಯಮಾಧ್ಯಮಗಳು ಕುಟುಂಬಸಮೇತ ನೋಡುವಂತ ಕಾರ್ಯಕ್ರಮಗಳು ಪ್ರಸಾರ ಮಾಡಬೇಕು, ಸಮಾಜಿಕ ಸಂದೇಶವನ್ನು,ಜಾಗೃತಿಯನ್ನು ಮೂಡಿಸುವ ವಿಚಾರಗಳನ್ನು ಪ್ರಸಾರ ಮಾಡಿಬೇಕು. ವಿಜಯ ಕರ್ನಾಟಕ ರಕ್ಷಣಾ ವೇದಿಕೆಯವತಿಯಿಂದ ವಿವಿಧ ಸಹಾಯವಾಣಿಗಳನ್ನು ಪ್ರಾರಂಭಮಾಡಲಾಗಿದ್ದು ಜನರ ಕಷ್ಟಗಳನ್ನು ಸ್ಪಂದಿಸುವ ಕಾರ್ಯಮಾಡಿ ಜನರ ವಿಶ್ವಾಸವನ್ನು ಗಳಿಸಬೇಕು, ಕನ್ನಡ ಪರ ಸಂಘಟನೆಗಳು ಒಂದಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ನಾಡು,ನುಡಿ,ಬಾಷೆಯ ,ಉಳಿವಿಗೆ ಶ್ರಮಿಸಬೇಕು ಎಂದು ತಿಳಿಸಿದರು.
ಕಲ್ಮಠ ಶ್ರೀ ವಿರೂಪಾಕ್ಷಪಂಡಿತಾರಾಧ್ಯಶಿವಾಚಾರ್ಯ ಮಹಾಸ್ವಾಮಿಗಳು ಜಟಾಯು ಪಕ್ಷಿ ರಾಮಯಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತದೆ.ಮಾಧ್ಯಮ ಕ್ಷೇತ್ರದಿಂದ ದೇಶದಲ್ಲಿ ಬಹುದೊಡ್ಡ ಪಾತ್ರವನ್ನು ವಹಿಸುತ್ತಿವೆ ಹಿಂದಿನ ದಿನಗಳಲ್ಲಿ ಮಾಧ್ಯಮ ಕ್ಷೇತ್ರದ ಹಿರಿಯರು ಒಂದು ಸೂಕ್ಷತೆ ,ಬದ್ದತೆಯಿಂದ ಕಾರ್ಯನಿರ್ವಹಿಸುತ್ತ ಪತ್ರಿಕೆಗಳಿಗೆ ಒಂದು ಘನತೆಯನ್ನು ತಂದು ಕೊಟ್ಟಿದ್ದರು, ಅದರಂತೆ ಇಂದಿನ ದಿನ ಮಾಧ್ಯಮಗಳ ದೃಷ್ಟಿಕೋನ ಬದಲಾಗಿರುವುದನ್ನು ಕಾಣಬಹುದಾಗಿದೆ ಸತ್ಯ,ಅಸತ್ಯಗಳನ್ನು,ಪರಿಶೀಲಿಸಿ ಸಮಾಜವನ್ನು ಸರಿದಾರಿಗೆ ತರುವ ಕಾರ್ಯವನ್ನು ಇಂದು ಮಾಧ್ಯಮಗಳು ಮಾಡಬೇಕಾಗಿದೆ ಎಂದು ತಿಳಿಸಿದರು.
ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳಿಗೆ ಗುರುತಿನ ಚೀಟಿ ಹಾಗೂ ಒಂದು ಲಕ್ಷ ರೂ ಜೀವ ವಿಮಾ ಬಾಂಡ್‌ಗಳ ವಿತರಣೆ. ಮಹಿಳೆಯರಿಗೆ ಉಚಿತವಾಗಿ ಹೊಲಿಗೆ ಯಂತ್ರ ವಿತರಣೆ,ಮಹಿಳೆಯರು ಮತ್ತು ಕಾರ್ಮಿಕರ ಸಹಾಯವಾಣಿ ಮತ್ತು ಸಂಘಟನೆಯ ಯೂಟ್ಯೂಬ್ ಚಾನಲ್‌ಗೆ ಮತ್ತು ನಗರ ಘಟಕ,ಅಟೋ ಘಟಕಗಳಿಗೆ ಚಾಲನೆ ನೀಡಲಾಯಿತು.
ಕಾರ್ಯಕ್ರಮದಲ್ಲಿ ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಘಟನ ಕಾರ್ಯದರ್ಶಿ ಡಿ.ವಿ.ಸುಬ್ರಹ್ಮಣ್ಯ ಜಿಲ್ಲಾ ಕಾರ್ಯಧ್ಯಕ್ಷರಾದ ಆನಂದ ಸ್ವಾಮಿ ಹಿರೇಮಠ, ತಾ.ಅಧ್ಯಕ್ಷ ಭೀಮಣ್ಣ ಮುದಗಲ್, ತಾ.ವೀರಶೈವ ಲಿಂಗಾಯತ ಸಮಾಜದ ತಾ.ಅಧ್ಯಕ್ಷರಾದ ಹರಿಹರ ಪಾಟೀಲ್, ಬಿ.ಜೆ.ಪಿ. ಜಿಲ್ಲಾ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಜಕ್ಕಲದಿನ್ನಿ, ಟಿ.ಎ.ಪಿ.ಎಂ.ಎಸ್.ಸಮಿತಿಯ ಅಧ್ಯಕ್ಷರಾದ ತಿಮ್ಮರೆಡ್ಡಿ ಭೋಗವತಿ,ಕಾಂಗ್ರೇಸ್ ಹಿರಿಯ ಮುಂಖಂಡರಾದ ಬಾಲಸ್ವಾಮಿಕೊಡ್ಲಿ, ಖಾಲಿದ್ ಗುರು, ಜಂಬಣ್ಣ ನೀಲಾಗಲ್,ರಾಜಾ ಸುಭಾಶ್ಚಂದ್ರನಾಯಕ, ಕ.ಕಾ.ನಿ. ಪ.ಸಂಘದ ತಾ.ಅಧ್ಯಕ್ಷರಾದ ಆಶೋಕ ತಡಕಲ್, ,ಸೇರಿದಂತೆ ಇನ್ನಿತರರು ಇದ್ದರು.

# ಮರ್ಯಾದೆಗೇಡು ಹತ್ಯೆಗೆ ಮನುವಾದವೆ ಮೂಲ: ಡಾ. ಜಗದೇವಿ ಗಾಯಕವಾಡ



**ವಾಡಿ:ಜ.12:** ಬುದ್ಧ ಬಸವ, ಸೂಫಿ ಸಂತರು, ಶರಣರು, ನಡೆದಾಡಿದ ನೆಲದಲ್ಲಿ ಜಾತಿ ಹೆಸರಲ್ಲಿ ಮರ್ಯಾದೆಗೇಡು ಹತ್ಯೆ ನಡೆಯುತ್ತಿರುವುದು ನಾಗರಿಕ ಸಮಾಜ ತಲೆತಗ್ಗಿಸುವ ಸಂಗತಿಯಾಗಿದೆ ಇದಕ್ಕೆ ಮನುವಾದವೆ ಮೂಲಾಧಾರವಾಗಿದೆ ಎಂದು ಮಹಿಳಾಪರ ಚಿಂತಕಿ, 11ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷರಾದ ಡಾ। ಜಗದೇವಿ ಗಾಯಕವಾಡ ಹೇಳಿದರು.
ಪಟ್ಟಣದ ಸೆಂಟ್ ಅಂಬ್ರೋಸ್ ಕಾನ್ವೆಂಟ್ ಶಾಲೆಯಲ್ಲಿ ಸಂಚಲನ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ಆಯೋಜಿಸಿದ್ದ ಮರ್ಯಾದೆಗೇಡು ಹತ್ಯೆ ಹಿಂದಿನ ಮನುವಾದ ಹುಡುಕುತ್ತಾ ಒಂದು ಚರ್ಚೆ ಎಂಬ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ಬುದ್ಧ ತನ್ನ ಸಂಘದಲ್ಲಿ ಜಾತಿ ಪರಿಗಣಿಸದೆ ಎಲ್ಲರಿಗೂ ಸಮಾನ ಅವಕಾಶ ನೀಡಿದರು. ನಂತರ ಬಸವಣ್ಣನ ನೇತ್ರತ್ವದಲ್ಲಿ ನಡೆದ ಶರಣ ಚಳುವಳಿಯಲ್ಲಿ, ಜಾತಿ ಧರ್ಮದ ಗಡಿ ದಾಟಿ ಅಂತರಜಾತಿ ವಿವಾಹ ಮಾಡಿಸಿದರು. ಅವರ ವಾರಸುದಾರರೇಂದು ಹೇಳುವ ನಾವು ಅಂತರ ಜಾತಿ ವಿವಾಹವನ್ನು ಅಡ್ಡಿಪಡಿಸದೆ ಆಶಿರ್ವಾದಿಸಬೇಕು ಎಂದು ಹೇಳಿದರು.
ಮಾನ್ಯಳ ಹತ್ತೆ ಖಂಡಿಸಿ ಯಾವ ಮಹಿಳೆ ಸಂಘಟನೆಗಳು ಧ್ವನಿ ಎತ್ತದಿರುವುದು ಬೆಸರದ ಸಂಗತಿ, ಸರಕಾರ ಮರ್ಯಾದೆಗೇಡು ಹತ್ಯೆ ತಡೆ ಕಾಯ್ದೆ ಜಾರಿಗೊಳಿಸಬೇಕು, ಮಾನ್ಯಳ ಹತ್ಯೆ ಮಾಡಿದವರಿಗೆ ಕಠಿಣ ಶಿಕ್ಷೆವಿದಿಸಬೇಕು ಎಂದು ಸರ್ಕಾರಕ್ಕೆ ಆಗ್ರಹಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪುರಸಭೆ ಸಮೂದಾಯ ಸಂಘಟಕ ಕಾಶಿನಾಥ ಧನ್ನಿ ಮಾತನಾಡಿ ಸಮಾಜದಲ್ಲಿ ನಡೆಯುತ್ತಿರುವ ಅನೇಕ ಅನ್ಯಾಯದ ವಿರುದ್ಧ ಸಂಚಲನ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ತನ್ನದೇ ಆದ ಅಕ್ಷರ ಕ್ರಾಂತಿಯಿಂದ ಪ್ರತಿರೋಧ್ಧ ವ್ಯಕ್ತಪಡಿಸುತ್ತಿದೆ ಎಂದು ಮೇಚ್ಚುಗೆ ವ್ಯಕ್ತ ಪಡಿಸಿದರು.
ಕಾಯಕ ಆಧಾರಿತ ಜಾತಿ ಮುಂದೆ ಜನ್ಮ ಆಧಾರಿತವಾಗಿ ದಲಿತ ದಮನಿತರ ಶೋಷಣೆಗೆ ಅಣಿಮಾಡಿತ್ತು. ತಂತ್ರಜ್ಞಾನ ಯುಗದಲ್ಲಿ ಜಾತಿ ಆಧಾರದ ಮೇಲೆ ಕೋಲೆ ಮಾಡುವುದು ನಾಗರಿಕ ಸಮಾಜ ತಲೆತಗ್ಗಿಸುವಂತ ಸಂಗತಿಯಾಗಿದೆ. ಈ ಅನಿಷ್ಠ ಪದ್ಧತಿಯನ್ನು ಖಂಡಿಸಿ ಕಾಲಕಾಲಕ್ಕೆ ಅನೇಕ ಜನ ಸಮಾಜ ಸುಧಾರಕರು ಹೋರಾಟ ಮಾಡಿದ್ದರೂ ಈ ಜಾತಿ ತಾರತಮ್ಯ ಸಂಪೂರ್ಣವಾಗಿ ಹೊಗಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಸೆಂಟ್ ಅಂಬ್ರೋಸ್ ಶಾಲೆಯ ಪ್ರಿನ್ಸಿಪಾಲರಾದ ಸಿಸ್ಟರ್ ಗ್ರೇಸಿ, ಯಶೋಧಾ ಪವಾರ, ವೇದಿಕೆಯ ಅಧ್ಯಕ್ಷ ಶ್ರಾವಣಕುಮಾರ ಮೂಸಲಗಿ ಮಾತನಾಡಿದರು
ಖೇಮಲಿಂಗ ಬೆಳಮಗಿ ಅಧ್ಯಕ್ಷತೆ ವಹಿಸಿದ್ದರು, ದೇವಿಂದ್ರ ಕರದಳ್ಳಿ ಪ್ರಾಸ್ತಾವಿಕ ಮಾತನಾಡಿದರು, ರವಿಕುಮಾರ ಕೊಳಕುರ ನಿರುಪಿಸಿರು ದಯಾನಂದ ಖಜೂರಿ ಸ್ವಾಗತಿಸಿದರು, ಸಿದ್ದಯ್ಯ ಶಾಸ್ತ್ರಿ ನಂದೂರಮಠ ವಂದಿಸಿದರು.
ಜನಕಲಾ ತಂಡದ ಶೋಭಾ ನಿಂಬರ್ಗಾ ಮತ್ತು ಸಂಗಡಿಗರು ಜಾಗೃತ ಗೀತೆಗಳನ್ನು ಹಾಡಿದರು.
ವಿಕ್ರಮ ನಿಂಬರ್ಗಾ, ಚಂದ್ರು ಕರಣಿಕ ರಾಯಪ್ಪ ಕೊಟಗಾರ, ಮಡಿವಾಳಪ್ಪ ಹೇರೂರ, ಭೀಮಾ ನಾಟೇಕರ,ಬೈಲಪ್ಪ ಜೇವರ್ಗಿ,ಬಸವರಾಜ ಕೇಶ್ವಾರ, ಈರಣ್ಣ ಎಲಗಟ್ಟಿ,ಅಲ್ಲಾಭಕ್ಷ, ಸುಜಾತ ವೋಸಲಗಿ, ಸುನಿತಾ ಖಜೂರಿ, ಗೀತಾ ಕೋಳಕೂರ,ವಿಜಯಕುವಾರ ಗಾಯಕವಾಡ, ವಿಠಲ ಠಾಣೆದಾರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE